# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 309 ₹ 4, WEDNESDAY, 07 FEBRUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ದೆಹಲಿಯಲ್ಲಿ ಎಲ್‌ಇಟಿ ಉಗ್ರ, ನಿವೃತ್ತ ಸೇನಾ ಸಿಬ್ಬಂದಿಯ ಬಂಧನ

ನವದೆಹಲಿ: ಜಮ್ಮು ಮತ್ತು ಕಾಶ್ಮೀರದ ಕುಪ್ವಾರದಲ್ಲಿ ಕಾರ್ಯಾನಿರ್ವಹಿಸುತ್ತಿರುವ ಲಷ್ಕರ್-ಎ-ತೊಯ್ಬಾ ಸಂಘಟನೆಯ ಉಗ್ರನನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ ಎಂದು ಮಂಗಳವಾರ ಅಧಿಕಾರಿಗಳು ತಿಳಿಸಿದ್ದಾರೆ.

ಬಂಧಿತ ಉಗ್ರ ನಿವೃತ್ತ ಸೇನಾ ಸಿಬ್ಬಂದಿಯಾಗಿದ್ದು. ಗಡಿ ನಿಯಂತ್ರಣ ರೇಖೆಯಿಂದ(ಎಲ್‌ಒಸಿ) ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ಪಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾನೆ ಎಂದು ಅವರು ಹೇಳಿದ್ದಾರೆ.

ಆರೋಪಿಯನ್ನು ಕುಪ್ವಾರಾ ಜಿಲ್ಲೆಯ ರಿಯಾಜ್ ಅಹ್ಮದ್ ರಾಥರ್ ಎಂದು ಗುರುತಿಸಲಾಗಿದ್ದು, ಆತನನ್ನು ಭಾನುವಾರ ದೆಹಲಿ ರೈಲು ನಿಲ್ದಾಣದಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿ, ಎಲ್‌ಒಸಿಯಲ್ಲಿ ಉಗ್ರರಿಂದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ಪಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದ್ದು, ಖುರ್ಷೀದ್ ಅಹ್ಮದ್ ರಾಥರ್ ಮತ್ತು ಗುಲಾಮ್ ಸರ್ವರ್ ಜೊತೆಗೆ ಸಂಚು ರೂಪಿಸುತ್ತಿದ್ದ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಕೇಂದ್ರದ ವಿರುದ್ಧದ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ರಾಜ್ಯದ ಕೇಂದ್ರ ಸಚಿವರು, ಸಂಸದರು, ಎಚ್ ಡಿಕೆ, ದೇವೇಗೌಡಗೆ ಸಿಎಂ ಪತ್ರ


ಬೆಂಗಳೂರು: ತೆರಿಗೆ ಹಂಚಿಕೆ ವಿಚಾರದಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ ಖಂಡಿಸಿ ಬುಧವಾರ ದೆಹಲಿಯಲ್ಲಿ ಪ್ರತಿಭಟನೆ ನಡೆಸಲು ಕಾಂಗ್ರೆಸ್ ನಿರ್ಧರಿಸಿದ್ದು, ಈ ಧರಣಿಯಲ್ಲಿ ಭಾಗವಹಿಸುವಂತೆ ರಾಜ್ಯದ ಕೇಂದ್ರ ಸಚಿವರು, ಸಂಸದರು ಮತ್ತು ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಪತ್ರ ಬರೆದಿದ್ದಾರೆ.

ಈಗಾಗಲೇ ಸಿಎಂ ಸಿದ್ದರಾಮಯ್ಯ ಅವರು ನಡೆದ ಸುದ್ದಿಗೋಷ್ಠಿಯಲ್ಲಿ ಇದು ಬಿಜೆಪಿ ವಿರುದ್ಧ ಕಾಂಗ್ರೆಸ್ ನಡೆಸುವ ಪ್ರತಿಭಟನೆ ಅಲ್ಲ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧ ನಡೆಯುವ ಪ್ರತಿಭಟನೆ ಎಂದು ಸ್ಪಷ್ಟಪಡಿಸಿದ್ದಾರೆ.

ಹೀಗಾಗಿ ಬಿಜೆಪಿ ಸಂಸದರು ಮತ್ತು ಶಾಸಕರುಗಳಿಗೂ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದ್ದಾರೆ.



ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸಿಎಂ, ಕರ್ನಾಟಕದಿಂದ ರಾಜ್ಯಸಭೆಗೆ ಆಯ್ಕೆಯಾಗಿ ಕೇಂದ್ರದ ವಿತ್ತ ಸಚಿವರಾಗಿರುವ ನಿರ್ಮಲಾ ಸೀತಾರಾಮನ್, ರಾಜ್ಯಸಭೆಯ ವಿಪಕ್ಷ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಮಾಜಿ ಪ್ರಧಾನಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಎಚ್ ಡಿ ದೇವೇಗೌಡ, ಕರ್ನಾಟಕದಿಂದ ಆಯ್ಕೆಯಾಗಿ ಕೇಂದ್ರ ಸಚಿವರಾಗಿರುವ ಪ್ರಹ್ಲಾದ್ ಜೋಶಿ, ರಾಜೀವ್ ಚಂದ್ರಶೇಖರ್, ಶೋಭಾ



ಸಿದ್ದರಾಮಯ್ಯ
ಮುಖ್ಯ ಮಂತ್ರಿ

ವಿಧಾನ ಸೌಧ
ಬೆಂಗಳೂರು – 560 001

ದಿನಾಂಕ 05.02.2024

No.: CM/PS/72೫೧೧೬೪/2024

ಮಾನ್ಯರೆ,

ಒಂದು ವಿಶೇಷ ಸಂದರ್ಭದಲ್ಲಿ ಈ ಪತ್ರವನ್ನು ತಮಗೆ ಬರೆಯುತ್ತಿದ್ದೇನೆ.

ಕೇಂದ್ರ ಸರ್ಕಾರದಿಂದ ಆಗುತ್ತಿರುವ ನಿರಂತರ ಅನ್ಯಾಯ ಮತ್ತು ಕರ್ನಾಟಕದ ವಿಚಾರವಾಗಿ ಕೇಂದ್ರ ಸರ್ಕಾರವು ತೋರುತ್ತಿರುವ ಮಲತಾಯಿ ಧೋರಣೆಯು ತಮಗೆ ಈಗಾಗಲೇ ತಿಳಿದ ವಿಷಯವಾಗಿರುತ್ತದೆ. ಇದರ ವಿರುದ್ಧ ಪ್ರತಿಭಟಿಸಲು ಮತ್ತು ದೇಶದ ಗಮನ ಸೆಳೆಯಲು ತೀರ್ಮಾನಿಸಲಾಗಿದೆ. ರಾಜ್ಯದ ಉಪ ಮುಖ್ಯಮಂತ್ರಿಗಳು, ಎಲ್ಲ ಸಚಿವರು, ಶಾಸಕರು ಮತ್ತು ಸಂಸದರು ಸೇರಿ ದೆಹಲಿಯ ಜಂತರ್ ಮಂತರ್‌ನಲ್ಲಿ, ಫೆಬ್ರವರಿ 07 ರಂದು ಒಂದು ದಿನದ ಧರಣಿ ಸತ್ಯಾಗ್ರಹವನ್ನು ನಡೆಸಲು ತೀರ್ಮಾನಿಸಿದ್ದೇವೆ.

ಕರ್ನಾಟಕಕ್ಕೆ ತೆರಿಗೆ ಪಾಲಿನ ಹಂಚಿಕೆಯಲ್ಲಿ ಆಗುತ್ತಿರುವ ಭಾರೀ ಅನ್ಯಾಯ, ಬರಪರಿಹಾರ ನೀಡದಿರುವುದು, ವಿವಿಧ ಯೋಜನೆಗಳಿಗೆ ಅನುಮತಿ ಮತ್ತು ನೆರವು ನೀಡುವಲ್ಲಿ ತೋರುತ್ತಿರುವ ನಿರ್ಲಕ್ಷ್ಯ ಮತ್ತು ವಿಳಂಬ ಇತ್ಯಾದಿಗಳು ರಾಜ್ಯದಲ್ಲಿ ಜನಜೀವನವನ್ನು ವಿಪರೀತವಾಗಿ ಬಾಧಿಸುತ್ತಿವೆ. ಈ ವಿಚಾರವನ್ನು ಜವಾಬ್ದಾರಿಯುತ ಚುನಾಯಿತ ಪ್ರತಿನಿಧಿಗಳಾದ ತಾವು ಅರಿತೇ ಇರುತ್ತೀರಿ. ಆದುದರಿಂದ, ಈ ಧರಣಿ ಸತ್ಯಾಗ್ರಹದಲ್ಲಿ ತಾವು ಕೂಡಾ ಪಾಲ್ಗೊಂಡು ಅದರ ಯಶಸ್ಸಿಗೆ ನೆರವಾಗಬೇಕು ಎಂದು ತಮ್ಮಲ್ಲಿ ಕರ್ನಾಟಕದ ಸಮಸ್ತ ಜನತೆಯ ಪರವಾಗಿ ವಿನಂತಿಸುತ್ತೇನೆ.

ಧನ್ಯವಾದಗಳೊಂದಿಗೆ.

ಇತಿ ತಮ್ಮ ವಿಶ್ವಾಸದ

(ಸಿದ್ದರಾಮಯ್ಯ)

ಶ್ರೀಮತಿ ನಿರ್ಮಲಾ ಸೀತಾರಾಮನ್ ರವರು
ಮಾನ್ಯ ಹಣಕಾಸು ಸಚಿವರು
ಭಾರತ ಸರ್ಕಾರ.

2157

ಕರಂದ್ಲಾಜೆ, ಎ.ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಡಿವಿ ಸದಾನಂದಗೌಡ ಸೇರಿದಂತೆ ದೆಹಲಿಯಲ್ಲಿ ನಾಡನ್ನು ಪ್ರತಿನಿಧಿಸುತ್ತಿರುವ ಎಲ್ಲಾ ಗೌರವಾನ್ವಿತರಿಗೆ ನಾಳೆ ನಡೆಯಲಿರುವ ದಿಲ್ಲಿ ಚಲೋದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಿ ಪತ್ರ ಬರೆದಿದ್ದೇನೆ ಎಂದು ತಿಳಿಸಿದ್ದಾರೆ.

ಇದು ಯಾವುದೇ ಪಕ್ಷದ ವಿರುದ್ಧದ ಹೋರಾಟವಲ್ಲ, ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರದಿಂದ ನಾಡಿಗೆ ಆಗುತ್ತಿರುವ ಅನ್ಯಾಯ, ತೆರಿಗೆ ಪಾಲು ಮತ್ತು ಅನುದಾನ ಹಂಚಿಕೆಯಲ್ಲಿನ ತಾರತಮ್ಯದ ವಿರುದ್ಧದ ಹೋರಾಟ. ಕರ್ನಾಟಕದ ಭವಿಷ್ಯಕ್ಕಾಗಿ, ಕನ್ನಡಿಗರ ನೆಮ್ಮದಿಯ ಬದುಕಿಗಾಗಿ ನಾಳೆ ಬೆಳಿಗ್ಗೆ ದೆಹಲಿಯ ಜಂತರ್ ಮಂತರ್ ನಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡಿದ್ದೇವೆ. ಕನ್ನಡಿಗರಿಗೆ ಆಗುತ್ತಿರುವ ಅನ್ಯಾಯವನ್ನು ದೆಹಲಿ ಸರ್ಕಾರಕ್ಕೆ ತಲುಪಿಸಿ, ನ್ಯಾಯ ಕೇಳುವುದು ನಮ್ಮೆಲ್ಲರ ಕರ್ತವ್ಯ. ತಾವೆಲ್ಲರೂ ಪಕ್ಷಭೇಧ ಮರೆತು ಕರ್ನಾಟಕದ ಹಿತಕ್ಕಾಗಿ ನಮ್ಮ ಧ್ವನಿಗೆ ಧ್ವನಿಗೂಡಿಸುತ್ತೀರ ಎಂದು ನಂಬಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ.

## ನಮ್ಮ ಹಕ್ಕು ಪಡೆಯಲು ಕೇಂದ್ರದ ವಿರುದ್ಧ ಪ್ರತಿಭಟನೆ: ಸಚಿವ ಸತೀಶ್ ಜಾರಕಿಹೊಳಿ



ಬೆಂಗಳೂರು: ನಮ್ಮ ಹಕ್ಕು ಪಡೆಯಲು ನಾವು ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದೇವೆ, ಕಳೆದ ಹತ್ತು ವರ್ಷಗಳಿಂದ ರಾಜ್ಯಕ್ಕೆ ಬರಬೇಕಾದ ಅನುದಾನ ಬಂದಿಲ್ಲ. ಅದಕ್ಕಾಗಿಯೇ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ದೆಹಲಿಯಲ್ಲಿ ಪ್ರತಿಭಟನೆ ಮಾಡುತ್ತಿದ್ದೇವೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ, ತೆರಿಗೆ ಪಾಲು ಮತ್ತು ಅನುದಾನ ಹಂಚಿಕೆಯಲ್ಲಿನ ತಾರತಮ್ಯದ ವಿರುದ್ಧದ ಹೋರಾಟ ಮಾಡಿ ಗಮನ ಸೆಳೆಯುತ್ತೇವೆ.

ಅನುದಾನ ಹಂಚಿಕೆಗಾಗಿ ಸಿಎಂ ಸಿದ್ದರಾಮಯ್ಯ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ ಸಮಸ್ಯೆ ಬಗ್ಗೆ ತಿಳಿಸಿದರೂ ಇದುವರೆಗೆ ಸ್ಪಂದಿಸಿಲ್ಲ ಎಂದು ತಿಳಿಸಿದರು.

## ನೈತಿಕ ಪೊಲೀಸ್ ಗಿರಿ: ಮೂವರು ಪೊಲೀಸ್ ವಶಕ್ಕೆ



ಮಂಗಳೂರು: ಅನ್ಯಕೋಮಿನ ಯುವಕ, ಯುವತಿಗೆ ಹಿಂದೂ ಸಂಘಟನೆ ಕಾರ್ಯಕರ್ತರು ತೊಂದರೆ ನೀಡಿದ್ದು, ಈ ಕುರಿತು ಪಣಂಬೂರು ಪೊಲೀಸ್ ಠಾಣೆಯಲ್ಲಿ ನೈತಿಕ ಪೊಲೀಸ್ ಗಿರಿ ಪ್ರಕರಣ ದಾಖಲಿಸಲಾಗಿದೆ.

ಮಂಗಳೂರು ಹೊರವಲಯದ ಪಣಂಬೂರು ಬೀಚ್ಗೆ ಬಂದಿದ್ದ ಕೇರಳದ ಯುವಕ ಹಾಗೂ ಬೆಂಗಳೂರಿನ ಯುವತಿಯನ್ನು ತಡೆದಿರುವ ಹಿಂದೂ ಸಂಘಟನೆ ಕಾರ್ಯಕರ್ತರು ವಿಚಾರಣೆ ನಡೆಸಿ ತೊಂದರೆ ಕೊಟ್ಟಿದ್ದಾರೆ. ಈ ಕುರಿತು ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಪಣಂಬೂರು ಪೊಲೀಸರು ರಾಮ ಸೇನೆಯ ಮೂವರು ಕಾರ್ಯಕರ್ತರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

## ಬೆಂಗಳೂರು: ಹಾಲಿನ ಸಬ್ಸಿಡಿ ಬಿಡುಗಡೆಗೆ ಒತ್ತಾಯಿಸಿ ಗೋವುಗಳೊಂದಿಗೆ ಬಿಜೆಪಿ ಕಾರ್ಯಕರ್ತರ ಪ್ರತಿಭಟನೆ

ಬೆಂಗಳೂರು: ಹಾಲು ಉತ್ಪಾದಕರಿಗೆ ಬಾಕಿ ಇರುವ ಸಬ್ಸಿಡಿಯನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ವಿರುದ್ಧ ಪ್ರತಿಭಟನೆ ನಡೆಸಿದರು.

ತಮ್ಮ ಗೋವುಗಳೊಂದಿಗೆ ನಗರದ ಫ್ರೀಡಂ ಪಾರ್ಕ್ ಗೆ ಆಗಮಿಸಿದ ಬಿಜೆಪಿ ಕಾರ್ಯಕರ್ತರು, ಅನ್ನದಾತರಿಗೆ ಟೋಪಿ ಹಾಕಿರುವ ರೈತ ವಿರೋಧಿ ಸರ್ಕಾರಕ್ಕೆ ಧಿಕ್ಕಾರ ಎಂದು ಘೋಷಣೆ ಕೂಗಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಕೇವಲ ಜನತೆಗೆ ಮಾತ್ರವಲ್ಲ, ಜಾನುವಾರುಗಳಿಗೂ ಶಾಕ್ ನೀಡುತ್ತದೆ. ಹಾಲು ಉತ್ಪಾದಕರಿಗೆ ಸಬ್ಸಿಡಿ ಹೆಚ್ಚಳ, ಹಸು-ಎಮ್ಮೆ ಖರೀದಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಎಂಬಿತ್ಯಾದಿ ಕಲರ್ ಕಲರ್ ಹೂವುಗಳನ್ನು ಕಿವಿ ಮೇಲೆ ಇಟ್ಟು ಅಧಿಕಾರಕ್ಕೆ ಬಂದು, ಈಗ ಸಾಲವನ್ನು ನೀಡುತ್ತಿಲ್ಲ, ಸಬ್ಸಿಡಿಯನ್ನೂ ಹೆಚ್ಚಿಸುತ್ತಿಲ್ಲ ಎಂದು ಬಿಜೆಪಿ ನಾಯಕರು ಕಿಡಿಕಾರಿದರು.

ಈಗ ರೈತರಿಗೆ ಹಾಲಿನ ಸಬ್ಸಿಡಿಯಾಗಿ 716 ಕೋಟಿ



ರೂಪಾಯಿ ನೀಡಬೇಕಿದ್ದು. ಆ ಬಾಕಿ ಹಣವನ್ನೂ ನೀಡದೆ ಹಾಗೇ ಉಳಿಸಿಕೊಂಡಿದೆ ಎಂದು ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ಇದರ ಪರಿಣಾಮ ರಾಜ್ಯದಲ್ಲಿ ಹಾಲಿನ ಉತ್ಪಾದನೆಯು ಭಾರಿ ಪ್ರಮಾಣದಲ್ಲಿ ಕುಂಠಿತವಾಗಿದೆ. ಜನತೆಯ ಜತೆ ಜಾನುವಾರುಗಳ ಶಾಪವೂ ಸಹ ಸಿಎಂ ಸಿದ್ದರಾಮಯ್ಯ ಅವರಿಗೆ ತಟ್ಟುತ್ತದೆ ಎಂದು ಬಿಜೆಪಿ ನಾಯಕರು ವಾಗ್ದಾಳಿ ನಡೆಸಿದರು.

## ಪಟಾಕಿ ಕಾರ್ಖಾನೆಯಲ್ಲಿ ಅಗ್ನಿ ಅವಘಡ 11 ಜನರ ಸಾವು

ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ ಸಂಭವಿಸಿದ ಪರಿಣಾಮ 6 ಜನರು ಸಾವನ್ನಪ್ಪಿದ್ದು, 60 ಜನರು ಗಾಯಗೊಂಡಿರುವ ಘಟನೆ ಮಧ್ಯಪ್ರದೇಶದ ಹರ್ದಾ ಜಿಲ್ಲೆಯ ಬೈರಾಗರ್ ಗ್ರಾಮದಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಸ್ಫೋಟದ ತೀವ್ರತೆ ಎಷ್ಟಿತ್ತೆಂದರೆ, ನರ್ಮದಾಪುರಂ ಜಿಲ್ಲೆಯ ಪಕ್ಕದ ಸಿಯೋನಿ ಮಾಲ್ವಾ ಪ್ರದೇಶದಲ್ಲಿ ಭೂಮಿ ಕಂಪಿಸಿದೆ ಎಂದು ಜನ ಹೇಳಿದ್ದಾರೆ ಎನ್ನಲಾಗಿದೆ.

ಬೆಂಕಿ ಅವಘಡ ಸಂಭವಿಸಿದ ಕೆಲವೇ ಹೊತ್ತಿನಲ್ಲಿ ಭಾರಿ ಸ್ಫೋಟದ ಸದ್ದು ಕೇಳಿದೆ. ಈ ವೇಳೆ ದೊಡ್ಡ ಬೆಂಕಿಯ ಜ್ವಾಲೆ ದೂರದವರೆಗೂ ವ್ಯಾಪಿಸಿರುವುದು ಕಂಡುಬಂದಿದೆ. ಅಲ್ಲದೆ ಬೆಂಕಿಯ ಕೆನ್ನಾಲಿಗೆ



ಆಕಾಶದೆತ್ತರಕ್ಕೆ ಚಿಮ್ಮಿದ್ದು, ದಟ್ಟ ಹೊಗೆ ಸುತ್ತಮುತ್ತಲ ಪ್ರದೇಶವನ್ನು ಆವರಿಸಿಕೊಂಡಿದೆ ಎಂದು ವರದಿಯಿಂದ ತಿಳಿದು ಬಂದಿದೆ.

ಇನ್ನು ಕಲೆಕ್ಟರ್ ನರೇಂದ್ರ ಕುಮಾರ್ ಸೂರ್ಯವಂಶಿ ಅವರ ಸೂಚನೆಯ ಮೇರೆಗೆ ಮುಖ್ಯ ವೈದ್ಯಕೀಯ ಮತ್ತು ಆರೋಗ್ಯ ಅಧಿಕಾರಿ ಡಾ. ರವಿಕಾಂತ್ ಉಯ್ಕೆ ಅವರು ನಾಲ್ಕು 108 ಆಂಬ್ಯುಲೆನ್ಸ್, ಇಬ್ಬರು ವೈದ್ಯರು ಮತ್ತು ಇತರ ಸಿಬ್ಬಂದಿಯನ್ನು ಒಳಗೊಂಡ ವೈದ್ಯಕೀಯ ತಂಡವನ್ನು ಹರ್ದಾಗೆ ಕಳುಹಿಸಿದ್ದಾರೆ.

ಜಿಲ್ಲಾಧಿಕಾರಿ ರಿಷಿ ಗರ್ಗ್ ಘಟನೆಯ ಬಗ್ಗೆ ತಿಳಿಸಿದ್ದು, ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಆಗಮಿಸಿದ್ದು, ಬೆಂಕಿಯನ್ನು ಹತೋಟಿಗೆ ತರುವ ಕಾರ್ಯ ನಡೆಯುತ್ತಿದೆ. ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ನಾವು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯನ್ನೂ ಕರೆಸಿದ್ದೇವೆ ಎಂದು ತಿಳಿಸಿದ್ದಾರೆ.


ಘಟನೆಯ ಬಗ್ಗೆ ವಿವರಗಳನ್ನು ಕೇಳಿದ್ದು ಅಲ್ಲದೆ ಘಟನಾ ಸ್ಥಳಕ್ಕೆ ಬೇಕಾದ ತುರ್ತು ಸೇವೆಗಳನ್ನು ಸಜ್ಜುಗೊಳಿಸಲು ಸೂಚನೆ ನೀಡಲಾಗಿದೆ. ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ನೀಡುವಂತೆ ಆದೇಶಿಸಲಾಗಿದೆ ಎಂದು ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಹೇಳಿದ್ದಾರೆ.

## ಯತ್ನಾಳ್ ಒಡೆತನದ ಸಕ್ಕರೆ ಕಾರ್ಖಾನೆ ಬಂದ್‌ಗೆ ಹೈಕೋರ್ಟ್ ಸೂಚನೆ

ಬೆಂಗಳೂರು: ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕುಟುಂಬದ ಒಡೆತನದಲ್ಲಿರುವ ಸಕ್ಕರೆ ಹಾಗೂ ಎಥೆನಾಲ್ ಘಟಕದ ಕಾರ್ಯಾಚರಣೆ ಸ್ಥಗಿತಗೊಳಿಸುವ ಕುರಿತು ಮಾಹಿತಿ ಪಡೆದು ತಿಳಿಸುವಂತೆ ಅರ್ಜಿದಾರರ ಪರ ವಕೀಲರಿಗೆ ಹೈಕೋರ್ಟ್ ಸೂಚನೆ ನೀಡಿದೆ.

ಯತ್ನಾಳ್ ಪುತ್ರ ಹಾಗೂ ಸಂಸ್ಥೆಯ ನಿರ್ದೇಶಕ ರಮಣಗೌಡ ಬಿ.ಪಾಟೀಲ್ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಪಿ.ಎಸ್ ದಿನೇಶ್ ಕುಮಾರ್ ಮತ್ತು ನ್ಯಾಯಮೂರ್ತಿ ಟಿ.ಜಿ ಶಿವಶಂಕರೇಗೌಡ ಅವರ ನೇತೃತ್ವದ ವಿಭಾಗೀಯ ಪೀಠ ಈ ಸೂಚನೆ ನೀಡಿ ವಿಚಾರಣೆ ಮುಂದೂಡಿದೆ.

ವಿಚಾರಣೆ ವೇಳೆ ಅರ್ಜಿದಾರರ ವಕೀಲರು, ಘಟಕವನ್ನು ರಾಜಕೀಯ ಉದ್ದೇಶದಿಂದ ಸ್ಥಗಿತಗೊಳಿಸಲು ಒತ್ತಾಯಿಸಲಾಗುತ್ತಿದೆ ಎಂದು ವಾದಿಸಿದರು.



ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಕಾರ್ಖಾನೆ ನಿಯಮದ ಪ್ರಕಾರ ನಡೆಯುತ್ತಿಲ್ಲ. ಇದರಿಂದಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಯಾವುದೇ ರಾಜಕೀಯ ಉದ್ದೇಶವಿಲ್ಲ ಎಂದು ನ್ಯಾಯಾಲಯದ ಮುಂದೆ ವಿವರಿಸಿದ್ದಾರೆ.

ಬಳಿಕ ನ್ಯಾಯಾಲಯ, ಕಾರ್ಖಾನೆ ಮುಚ್ಚುವ ಸಂಬಂಧ ಅರ್ಜಿದಾರರಿಂದ ಮಾಹಿತಿ ಪಡೆದು ತಿಳಿಸಬೇಕು ಎಂದು ಸೂಚಿಸಿದೆ. ಅಲ್ಲದೇ ವಿಚಾರಣೆಯನ್ನು ಫೆಬ್ರವರಿ 8ಕ್ಕೆ ಮುಂದೂಡಿದೆ. ಅರ್ಜಿದಾರರು 2021ರಲ್ಲಿ ಕಾರ್ಖಾನೆ ಖರೀದಿಸಿದ್ದು, ನಾವೀಗ 2024ರಲ್ಲಿದ್ದೇವೆ. ಈ ಅವಧಿಯಲ್ಲಿ ಅಗತ್ಯ ಅನುಮತಿ ಪಡೆಯಬೇಕಿತ್ತು. ಕಾನೂನಿನ ಪ್ರಕಾರ ನೀವು ಅನುಮತಿ ಪಡೆಯುವವರೆಗೆ ಕಾರ್ಖಾನೆ ನಡೆಸಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ತಿಳಿಸಿದೆ.

ಏನಿದು ಪ್ರಕರಣ?: ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲೂಕಿನಲ್ಲಿರುವ ಎಥೆನಾಲ್ ಮತ್ತು ಪವರ್ ಘಟಕ ಮುಚ್ಚುವಂತೆ ಕಲಬುರಗಿ ವಲಯದ ಹಿರಿಯ ಪರಿಸರ ಅಧಿಕಾರಿ ಜ.18ರಂದು ನೋಟಿಸ್ ಜಾರಿ ಮಾಡಿದ್ದರು. ಬಳಿಕ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣಾ ಮಂಡಳಿ ಜ.25ರಂದು ಆದೇಶ ಮಾಡಿತ್ತು. ಈ ಎರಡೂ ಆದೇಶವನ್ನು ರದ್ದುಮಾಡಬೇಕು ಎಂದು ಅರ್ಜಿದಾರರು ಹೈಕೋರ್ಟ್ ಮೆಟ್ಟಿಲೇರಿದ್ದರು.


## ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸಲು ಫೆ.17 ಕೊನೆಯ ದಿನ

ಬೆಂಗಳೂರು: ಸಾರಿಗೆ ಇಲಾಖೆ ವಾಹನಗಳಿಗೆ ಹೆಚ್ ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಸುವಂತೆ ಫೆ.17ರವರೆಗೆ ಗಡುವು ನೀಡಿದೆ. ಒಂದು ವೇಳೆ ನಿಗದಿತ ಗಡುವಿನ ಒಳಗೆ ನಂಬರ್ ಪ್ಲೇಟ್ ಅಳವಡಿಸದಿದ್ದರೆ ದಂಡ ಪ್ರಯೋಗಕ್ಕೆ ಮುಂದಾಗಿದೆ.

ಹೆಚ್ ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಫೆಬ್ರವರಿ 17 ಕೊನೆಯ ದಿನವಾಗಿದ್ದು, ನಿಗದಿತ ದಿನದೊಳಗೆ ಹೆಚ್ ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಸದಿದ್ದರೆ ದಂಡ ಪ್ರಯೋಗಕ್ಕೆ ಸಾರಿಗೆ ಇಲಾಖೆ ಮುಂದಾಗಿದೆ.

ಕರ್ನಾಟಕ ರಾಜ್ಯದಲ್ಲಿ 1ನೇ ಏಪ್ರಿಲ್ 2019ಕ್ಕಿಂತ ಮೊದಲು ನೋಂದಾಯಿಸಲ್ಪಟ್ಟ ಹಳೆಯ ಎಲ್ಲಾ (ಹಳೆಯ / ಅಸ್ತಿತ್ವದಲ್ಲಿರುವ ವಾಹನಗಳು) (ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು, ಲಘು ಮೋಟಾರು ವಾಹನಗಳು, ಪ್ರಯಾಣಿಕ ಕಾರುಗಳು, ಮಧ್ಯಮ ಮತ್ತು ಭಾರಿ ವಾಣಿಜ್ಯ ವಾಹನಗಳು, ಟ್ರೈಲರ್, ಟ್ರ್ಯಾಕ್ಟರ್ ಇತ್ಯಾದಿ) ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (ಹೆಚ್‌ಎಸ್‌ಆರ್ಪಿ) ಅಳವಡಿಸುವುದು ಕಡ್ಡಾಯವಾಗಿದೆ.

2019 ಏಪ್ರಿಲ್ 1ಕ್ಕಿಂತ ಹಳೆಯದಾದ ವಾಹನಗಳಿಗೆ ಹೈ



ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್-HSRP ಹಾಕಿಸಿಕೊಳ್ಳುವಂತೆ ಸಾರಿಗೆ ಇಲಾಖೆ ನೀಡಿರುವ ಗಡುವು ಫೆ.17ಕ್ಕೆ ಮುಕ್ತಾಯವಾಗಲಿದೆ.

ನಂಬರ್ ಪ್ಲೇಟ್ ಬದಲಾವಣೆಗೆ ಹಲವು ವಾಹನ ಮಾಲೀಕರು ಆಸಕ್ತಿ ತೋರುತ್ತಿಲ್ಲ.

ಈ ಹಿನ್ನೆಲೆಯಲ್ಲಿ ಬಿಸಿ ಮುಟ್ಟಿಸಲು ಇಲಾಖೆ ಮುಂದಾಗಿದೆ.ವಾಹನಗಳಿಗೆ ಹೆಚ್ ಎಸ್ ಆರ್ ಪಿ ಅಳವಡಿಸದೇ ಮೊದಲ ಬಾರಿ ಸಿಕ್ಕಿಬಿದ್ದರೆ 1000 ರೂಪಾಯಿ ದಂಡ, 2ನೇ ಬಾರಿ ಸಿಕ್ಕಿ ಬಿದ್ದರೆ 2000 ರೂಪಾಯಿ ದಂಡ ಹಾಕಲಾಗುತ್ತದೆ.

## ಸಿಎಂ ಸಿದ್ದರಾಮಯ್ಯಗೆ 10 ಸಾವಿರ ದಂಡ ವಿಧಿಸಿದ ಹೈಕೋರ್ಟ್

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಕಾಂಗ್ರೆಸ್ ನಾಯಕರಿಗೆ ಹೈಕೋರ್ಟ್ 10 ಸಾವಿರ ರೂ. ದಂಡ ವಿಧಿಸಿದೆ.

2022ರ ಏಪ್ರಿಲ್ 14ರಂದು ರೇಸ್ ವ್ಯೂ ಹೋಟೆಲ್ ಬಳಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತ್ತು. ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಹಿನ್ನೆಲೆಯಲ್ಲಿ ಸಚಿವರಾಗಿದ್ದ ಕೆ.ಎಸ್.ಈಶ್ವರಪ್ಪ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ನಾಯಕರು ರೇಸ್‌ಕೋರ್ಸ್ ರಸ್ತೆಯಲ್ಲಿ ಪ್ರತಿಭಟಿಸಿದ್ದರು.

ಸಾರ್ವಜನಿಕರಿಗೆ ಸಮಸ್ಯೆ ಉಂಟು ಮಾಡಿದ ಹಿನ್ನೆಲೆಯಲ್ಲಿ ನ್ಯಾಯಾಲಯ ಸಿದ್ದರಾಮಯ್ಯ, ಸುರ್ಜೆವಾಲಾ ಸೇರಿದಂತೆ ಕಾಂಗ್ರೆಸ್ ನಾಯಕರಿಗೆ ದಂಡ ವಿಧಿಸಿದೆ. ಸಿದ್ದರಾಮಯ್ಯನವರಿಗೆ ಮಾರ್ಚ್ 6 ರಂದು ಖುದ್ದು ನ್ಯಾಯಾಲಯಕ್ಕೆ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದೆ.

ಬೆಂಗಳೂರು ನಗರದಲ್ಲಿ ಎಲ್ಲೆಂದರಲ್ಲಿ ಪ್ರತಿಭಟನೆ ನಡೆಸುವಂತಿಲ್ಲ. ಪೊಲೀಸರಿಂದ ಅನುಮತಿ ಪಡೆದವರಿಗೆ ಮಾತ್ರ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟಿಸಲು ಅವಕಾಶ ನೀಡಲಾಗುತ್ತದೆ. ಬೇರೆ ಕಡೆ ಪ್ರತಿಭಟನೆ ನಡೆಸಿ ಸಾರ್ವಜನಿಕರಿಗೆ ಸಮಸ್ಯೆ ಉಂಟಾದಲ್ಲಿ ಕೇಸ್ ಹಾಕಲಾಗುತ್ತದೆ.

## ಹಾಕಿ ಸ್ಟಾರ್ ಆಟಗಾರನ ವಿರುದ್ಧ ಅತ್ಯಾಚಾರ ಆರೋಪ ಎಫ್‌ಐಆರ್ ದಾಖಲು

ಬೆಂಗಳೂರು : ಬೆಂಗಳೂರಿನ ಜ್ಞಾನಭಾರತಿ ಪೊಲೀಸ್ ಠಾಣೆಯಲ್ಲಿ, ಭಾರತೀಯ ಹಾಕಿ ತಂಡದ ಡಿಫೆಂಡರ್ ವರುಣ್ ಕುಮಾರ್ ವಿರುದ್ಧ ಮದುವೆ ಆಗುವುದಾಗಿ ಹೇಳಿ ನಂಬಿಸಿ ಮೋಸ ಮಾಡಿರುವ ಆರೋಪ ಕೇಳಿ ಬಂದಿದ್ದು, ಈ ಹಿನ್ನೆಲೆಯಲ್ಲಿ FIR ದಾಖಲಾಗಿದೆ.



ಯುವತಿಯು, ವರುಣ್ ಕುಮಾರ್ ವಿರುದ್ಧ ಅತ್ಯಾಚಾರ ಆರೋಪ ಮಾಡಿದ್ದು, ಪೋಕ್ಸೋ ಪ್ರಕರಣ ದಾಖಲಾಗಿದೆ.

ಯುವತಿ 17ನೇ ವಯಸ್ಸಿನಲ್ಲಿರುವಾಗ ಮದುವೆ ಯಾಗುವುದಾಗಿ ನಂಬಿಸಿ ಆಕೆಯ ಜತೆ ದೈಹಿಕ ಸಂಪರ್ಕ ಬೆಳೆಸಿ ವಂಚಿಸಿರುವುದಾಗಿ ಆರೋಪಿಸಿದ್ದಾಳೆ.

ಬೆಂಗಳೂರಿನ ಸಾಯಿ ಸ್ಟೇಡಿಯಂಗೆ ಹಾಕಿ ಪಂದ್ಯಗಳಿಗಾಗಿ ಭೇಟಿ ನೀಡಿದ ವೇಳೆ ವರುಣ್ ಕುಮಾರ್ ಲೈಂಗಿಕ ಸಂಬಂಧ ಹೊಂದಿದ್ದಾನೆ ಎಂದು ಯುವತಿ ಆರೋಪಿಸಿದ್ದಾಳೆ.

ವರುಣ್ ಕುಮಾರ್, ಯುವತಿಗೆ ಸಾಮಾಜಿಕ ಜಾಲತಾಣದ ಮೂಲಕ ಪರಿಚಯವಾಗಿದ್ದ. 17 ವರ್ಷದವಳಾಗಿದ್ದ ಆಕೆಯನ್ನು ಪ್ರೀತಿಸುವುದಾಗಿ ನಂಬಿಸಿದ್ದ ವರುಣ್ ಮನೆಯವರನ್ನು ಒಪ್ಪಿಸಿ ಮದುವೆಯಾಗುತ್ತೇನೆ ಎಂದು ನಂಬಿಸಿ ದೈಹಿಕ ಸಂಪರ್ಕ ಮಾಡಿದ್ದ. ಆದರೆ, ಈಗ ಮದುವೆಯಾಗದೇ ವಂಚಿಸಿದ್ದಾನೆ ಎಂದು ಯುವತಿ ತನ್ನ ದೂರಿನಲ್ಲಿ ತಿಳಿಸಿದ್ದಾಳೆ.

2019ರಲ್ಲಿ ನೈಟ್ ಡಿನ್ನರ್ ನೆಪದಲ್ಲಿ ಜಯನಗರಕ್ಕೆ ಕರೆದೊಯ್ದು ಬಲವಂತವಾಗಿ ದೈಹಿಕ ಸಂಪರ್ಕ ಬೆಳೆಸಿದ್ದ.

ಇದಾದ ಬಳಿಕವೂ ಆಗಾಗ ದೈಹಿಕ ಸಂಪರ್ಕ ಮಾಡಿದ್ದ. ಒಂದು ವರ್ಷದ ಹಿಂದೆ ನನ್ನ ತಂದೆ ಮೃತಪಟ್ಟಾಗ ಮನೆ ಬಳಿ ಬಂದು ಸಾಂತ್ವನ ಹೇಳಿ ಹೋಗಿದ್ದ. ಆದರೆ ಈಗ ಸಂಪರ್ಕಕ್ಕೆ ಸಿಗದೇ ವಂಚಿಸುತ್ತಿದ್ದಾನೆ ಎಂದು ಯುವತಿ ಆರೋಪಿಸಿದ್ದಾಳೆ.

ದೂರುದಾರ ಯುವತಿ ವಾಲಿಬಾಲ್ ಕ್ರೀಡೆಯಲ್ಲಿ ಆಯ್ಕೆಯಾಗಿ ಸ್ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾ ದಕ್ಷಿಣ ವಿಭಾಗದ ತರಬೇತಿ ಪಡೆಯುತ್ತಿದ್ದರು. ಈ ವೇಳೆ ಇಬ್ಬರ ಮಧ್ಯೆ ಪ್ರೀತಿ ಮೂಡಿ ಬಳಿಕ ದೈಹಿಕ ಸಂಬಂಧ ಹೊಂದಿದ್ದರು.

ವರುಣ್ ಕುಮಾರ್ 2021ನೇ ಸಾಲಿನ ಅರ್ಜುನ ಪ್ರಶಸ್ತಿ ಪಡೆದಿದ್ದರು.

ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಭಾರತ ಹಾಕಿ ತಂಡ ಕಂಚಿನ ಪದಕ ಗೆದ್ದ ತಂಡದ ಸದಸ್ಯರಾಗಿದ್ದ ವರುಣ್ಗೆ ಹಿಮಾಚಲ ಪ್ರದೇಶ ಸರ್ಕಾರ 1 ಲಕ್ಷ ಬಹುಮಾನ ನೀಡಿ ಗೌರವಿಸಿತ್ತು.

ಹಿಮಾಚಲ ಪ್ರದೇಶದವರಾದ ವರುಣ್ ಕುಮಾರ್ ಪಂಜಾಬ್‌ನ ಜಲಂಧರ್‌ನಲ್ಲಿ ವಾಸಿಸುತ್ತಿದ್ದರು. ಸದ್ಯ ಪರಾರಿಯಾಗಿರುವ ಅವರ ಪತ್ತೆಗಾಗಿ ಶೋಧ ನಡೆಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ಜೈಲಿನಲ್ಲಿರುವ 63 ಕೈದಿಗಳಿಗೆ ಎಚ್‌ಐವಿ ಪಾಸಿಟಿವ್

ಉತ್ತರ ಪ್ರದೇಶ: ಲಕ್ನೋ ಜಿಲ್ಲೆಯ ಕಾರಾಗೃಹದಲ್ಲಿ ಕನಿಷ್ಠ 36 ಕೈದಿಗಳಿಗೆ ಎಚ್‌ಐವಿ ಪಾಸಿಟಿವ್ ಬಂದಿದ್ದು, ಆತಂಕಕ್ಕೆ ಕಾರಣವಾಗಿದೆ. ಡಿಸೆಂಬರ್ 2023 ರಲ್ಲಿ ನಡೆಸಿದ ಆರೋಗ್ಯ ಪರೀಕ್ಷೆಯಲ್ಲಿ 36 ಕೈದಿಗಳು ಎಚ್‌ಐವಿ ಸೋಂಕಿಗೆ ಒಳಗಾಗಿದ್ದರೇ, ಒಟ್ಟು ಎಚ್‌ಐವಿ ಸೋಂಕಿತ ಕೈದಿಗಳ ಸಂಖ್ಯೆ 63 ರಷ್ಟಿದೆ ಎಂದು ಜೈಲು ಆಡಳಿತ ತಿಳಿಸಿದೆ. ಅಧಿಕಾರಿಗಳ ಪ್ರಕಾರ, ಎಚ್‌ಐವಿ ಸೋಂಕಿತ ಕೈದಿಗಳಲ್ಲಿ ಹೆಚ್ಚಿನವರು ಮಾದಕ ವ್ಯಸನದ ಹೊಂದಿರುವವರಾಗಿದ್ದಾರೆ.



ಜೈಲು ಆವರಣದ ಹೊರಗೆ ಬಿಸಾಡಿದ ಸಿರಿಂಜ್‌ಗಳ ಬಳಕೆಯಿಂದ ಈ ಸೋಂಕು ಕೈದಿಗಳಿಗೆ ಹರಡಿದೆ.

ಜೈಲು ಪ್ರವೇಶಿಸಿದ ನಂತರ ಯಾವುದೇ ಖೈದಿ ಎಚ್‌ಐವಿ ಸೋಂಕಿಗೆ ಒಳಗಾಗಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಎಲ್ಲಾ ಎಚ್‌ಐವಿ ಪಾಸಿಟಿವ್ ಬಂದಿರುವ ಕೈದಿಗಳು ಲಕ್ನೋದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಜೈಲು ಆಡಳಿತವು ಈ ವಿಷಯದಲ್ಲಿ ಜಾಗರೂಕವಾಗಿ ಕೆಲಸ ಮಾಡುತ್ತಿದ್ದು, ಸೋಂಕಿತ ಕೈದಿಗಳ ಆರೋಗ್ಯದ ವರದಿಯನ್ನು ನಿಯಮಿತವಾಗಿ ಪರಿಶೀಲನೆ ಮಾಡುತ್ತಿದೆ. ಜ. 1, 2023 ರಂದು ಜಿಲ್ಲಾ ಕಾರಾಗೃಹದಲ್ಲಿ 47 ಕೈದಿಗಳು ಎಚ್‌ಐವಿ ಪಾಸಿಟಿವ್ ಎಂದು ತಿಳಿದುಬಂದಿತ್ತು. ಸೆಪ್ಟೆಂಬರ್ 2023 ರಲ್ಲಿ ಪರೀಕ್ಷಾ ಕಿಟ್‌ಗಳು ಲಭ್ಯವಿಲ್ಲದ ಕಾರಣ, ಜೈಲಿನಲ್ಲಿ ಎಚ್‌ಐವಿ ಪರೀಕ್ಷೆಯನ್ನು ಮಾಡಲಾಗಲಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಯೋಧರಿಗೆ ಅವಮಾನ ಮಾಡಿದ ‘ಫೈಟರ್’ ಸಿನಿಮಾ: ನಟ-ನಟಿಗೆ ಲೀಗಲ್ ನೋಟಿಸ್



ಮುಂಬೈ: ಬಾಲಿವುಡ್ ನಟ ಹೃತಿಕ್ ರೋಷನ್ ಅಭಿನಯದ ‘ಫೈಟರ್’ ಸಿನಿಮಾ ಕಳೆದ ಜನವರಿ 25, 2024ರಂದು ರಿಲೀಸ್ ಆಗಿತ್ತು.

ಸಿದ್ಧಾರ್ಥ್ ಆನಂದ್ ನಿರ್ದೇಶನದ ಸಿನಿಮಾ ರಿಲೀಸ್ ಆಗಿ ಭಾರತದ ಅತಿದೊಡ್ಡ ಆ್ಯಕ್ಷನ್ ಸಿನಿಮಾ ಎಂದೆನಿಸಿಕೊಂಡಿತ್ತು. ಇದೀಗ ನಟ ಹೃತಿಕ್ ರೋಷನ್ ಹಾಗೂ ದೀಪಿಕಾ ಪಡುಕೋಣೆ ವಿರುದ್ಧ ಲೀಗಲ್ ನೋಟಿಸ್ ಜಾರಿ ಮಾಡಲಾಗಿದೆ.

ಈ ಚಿತ್ರದಲ್ಲಿ ದೀಪಿಕಾ ಪಡುಕೋಣೆ ನಾಯಕಿಯಾಗಿ ಕಾಣಿಸಿಕೊಂಡಿದ್ದರು. ಜೊತೆಗೆ ಅನಿಲ್ ಕಪೂರ್, ಅಕ್ಷಯ್ ಒಬೆರಾಯ್, ಸಂಜೀದಾ ಶೇಖ್ ಈ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿ ನಟಿಸುತ್ತಿದ್ದಾರೆ.

‘ಫೈಟರ್’ ಸಿನಿಮಾದಲ್ಲಿ ನಟ ಹೃತಿಕ್ ರೋಷನ್ ಹಾಗೂ ದೀಪಿಕಾ ಪಡುಕೋಣೆ ವಾಯುಪಡೆ ಅಧಿಕಾರಿಗಳಾಗಿ ಕಾಣಿಸಿಕೊಂಡಿದ್ದರು. ಸಿನಿಮಾದಲ್ಲಿ ಇಬ್ಬರೂ ನಾಯಕ-ನಾಯಕಿಯಾಗಿ ಅಭಿನಯಿಸಿದ್ದು, ವಾಯುಪಡೆ ಅಧಿಕಾರಿಗಳಾಗಿರುತ್ತಾರೆ.

ಇಬ್ಬರ ರೊಮ್ಯಾಂಟಿಕ್ ದೃಶ್ಯಗಳೂ ಇವೆ. ಆದರೆ ವಾಯುಪಡೆ ದಿರಿಸಿನಲ್ಲಿ ಚುಂಬನ, ರೊಮ್ಯಾಂಟಿಕ್ ದೃಶ್ಯಗಳನ್ನು ಮಾಡಿದ್ದಕ್ಕೆ ವಾಯುಪಡೆ ದೀಪಿಕಾ ಮತ್ತು ಹೃತಿಕ್ ಇಬ್ಬರಿಗೂ ವಾಯುಪಡೆ ಲೀಗಲ್ ನೋಟಿಸ್ ನೀಡಿದೆ.

ಭಾರತೀಯ ವಾಯುಪಡೆ ಆರೋಪವೇನು? ವಾಯುಪಡೆಗೆ ಅದರದ್ದೇ ಆದ ಗೌರವವಿದೆ. ಅದರ ಸಮವಸ್ತ್ರ ತ್ಯಾಗ, ಶಿಸ್ತು ಮತ್ತು ದೇಶಕ್ಕಾಗಿ ಸೇವೆ ಸಲ್ಲಿಸುವ ಬದ್ಧತೆಯ ಪ್ರತೀಕವಾಗಿದೆ.

ಆದರೆ ಸಿನಿಮಾದಲ್ಲಿ ಈ ಸಮವಸ್ತ್ರ ಧರಿಸಿ ರೊಮ್ಯಾಂಟಿಕ್ ದೃಶ್ಯಗಳಲ್ಲಿ ಭಾಗಿಯಾಗಿದ್ದು ವಾಯುಪಡೆಯ ಘನತೆಗೆ ಧಕ್ಕೆ ತಂದಂತೆ. ಇಂತಹ ದೃಶ್ಯಗಳನ್ನು ಸಿನಿಮಾದಲ್ಲಿ ತೋರಿಸಿ ವಾಯುಪಡೆಗೆ ಅವಮಾನ ಮಾಡಲಾಗಿದೆ.

ದೇಶಕ್ಕಾಗಿ ತ್ಯಾಗ ಮಾಡಿದ ಅಸಂಖ್ಯಾತ ಅಧಿಕಾರಿಗಳಿಗೆ ಇದು ಅವಮಾನ. ವಾಯುಪಡೆ ಸಮವಸ್ತ್ರ ಧರಿಸಿ ಕೆಲವು ಅಹಿತಕಾರಿ ಸನ್ನಿವೇಶಗಳನ್ನು ತೋರಿಸುವ ಮೂಲಕ ವಾಯುಪಡೆಯನ್ನು ತಪ್ಪಾಗಿ ಬಿಂಬಿಸಲಾಗಿದೆ ಎಂದು ನೋಟಿಸನಲ್ಲಿ ಹೇಳಲಾಗಿದೆ.

# ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿಯಾಗಿ ಸ್ವಾಗತಿಸಿದ ಶಾಸಕ ಬಿ.ಎಂ.ನಾಗರಾಜ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ಗ್ರಾಮಗಳಲ್ಲಿ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ರಥವು ಸೋಮವಾರದಂದು ಸಿರುಗುಪ್ಪ ತಾಲ್ಲೂಕಿನ ಬೀರಹಳ್ಳಿ, ಹಚ್ಚೊಳ್ಳಿ, ಕುಡದರಹಾಳ್, ಬಾಗೇವಾಡಿ ಹಾಗೂ ದೇಶನೂರು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಂಚರಿಸಿದ್ದು, ಸಿರುಗುಪ್ಪ ತಾಲ್ಲೂಕಿನ ಬಾಗೇವಾಡಿ ಗ್ರಾಮದಲ್ಲಿ ಶಾಸಕ ಬಿ.ಎಂ.ನಾಗರಾಜ ಅವರು ಸಂವಿಧಾನ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಸ್ವಾಗತಿಸಿಕೊಂಡರು. ಬಾಗೇವಾಡಿ ಗ್ರಾಮದಲ್ಲಿ ದಾರಿಯುದ್ದಕ್ಕೂ ಜಾಥಾದ ಜೊತೆಗೆ ಹೆಜ್ಜೆ ಹಾಕಿ ಗ್ರಾಮಸ್ಥರಲ್ಲಿ ಹೊಸ ಹುಮ್ಮಸ್ಸು ಮೂಡಿಸಿದರು.

ಜಾಥಾದ ಮಾರ್ಗದಲ್ಲಿ ಪ್ರತೀ ಹಳ್ಳಿಗಳಲ್ಲಿ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ಡಾ.ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಕಾಯಿ-ಕರ್ಪೂರ-ತೆಂಗಿನ ಕಾಯಿಗಳಿಂದ ಭಕ್ತಿಪೂರ್ವಕವಾಗಿ ಪೂಜಿಸುವುದರೊಂದಿಗೆ ಜಾಥಾಕ್ಕೆ ಸ್ವಾಗತ ಕೋರಿ ಭಾರತದ



ಸಂವಿಧಾನದ ಪ್ರಸ್ತಾವನೆಯ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಕಳಶ ಹಿಡಿದ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ಡೊಳ್ಳು ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಗ್ರಾಮದ ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಪಾಲ್ಗೊಂಡು ಜಾಥಾಗೆ ಮೆರಗು ನೀಡಿದರು.

ಹಚ್ಚೊಳ್ಳಿ ಹಾಗೂ ಕುಡದರಹಾಳ್ ಗ್ರಾಮಗಳಲ್ಲಿ ಅದ್ದೂರಿ ಮೆರವಣಿಗೆ:

ಹಚ್ಚೊಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ವಿವಿಧ ನಾಯಕರ ವೇಷ ಭೂಷಣಗಳೊಂದಿಗೆ ಭಾಗವಹಿಸಿ, ವಿದ್ಯಾರ್ಥಿಗಳಿಂದ ಪ್ರಸ್ತಾವನೆಯನ್ನು ಓದಿಸಿ, ಒಂದು ಕಿ.ಮೀ ವರೆಗೆ ಪಥ ಸಂಚಲನ ಮಾಡುವ ಮೂಲಕ ಜಾಥಾದಲ್ಲಿ ಪಾಲ್ಗೊಂಡಿದ್ದು ಉತ್ಸಾಹ ಇಮ್ಮಡಿಸಿತು.

ಹಚ್ಚೊಳ್ಳಿ ಗ್ರಾಮದ ವಿವಿಧ ಶಾಲೆಗಳ 25-30 ವಿದ್ಯಾರ್ಥಿಗಳು ವಿವಿಧ ವೇಷ ಭೂಷಣಗಳನ್ನು ಧರಿಸಿ ಮೆರವಣಿಗೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು.

ವಸತಿ ಶಾಲೆಯ ಪ್ರಾಂಶುಪಾಲರಾದ ಕೆ.ವಿ.ಕೋಟೇಶ್ವರ ಹಾಗೂ ಶಿಕ್ಷಕರಾದ ಮಲ್ಲಿಕಾರ್ಜುನ.ಎ., ನಾರಾಯಣ.ಇ., ಬಿಂಗಿ ತಿಪ್ಪೇಶ, ರಾಜು ಮೊದಲಾದವರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಹಚ್ಚೊಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಮಹೇಶ್ ಅವರು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ರವರ ಸಂವಿಧಾನವು ನಮ್ಮ ಜೀವನದಪೂಂದು ಭಾಗವಾಗಿದ್ದು, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ತತ್ವವನ್ನು ನಮಗೆಲ್ಲರಿಗೂ ನೀಡಿದೆ. ಜಾತ್ಯಾತೀತ, ಸಮಾಜವಾದಿ ರಾಷ್ಟ್ರ ನಮ್ಮದು ಇದು ನಮ್ಮೆಲ್ಲರ ಜೀವನದ ಸ್ಫೂರ್ತಿಯಾಗಿದೆ ಎಂದು ಸ್ಮರಿಸಿದರು.

ಬೀರಳ್ಳಿ ಗ್ರಾಮದಲ್ಲಿ ಗ್ರಾಮಸ್ಥ ಮುದ್ದಪ್ಪ ಅವರು ಮಾತನಾಡಿ, ರಾಜ್ಯ ಸರ್ಕಾರವು ಸಾರ್ವಜನಿಕರಲ್ಲಿ ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಈ ಉತ್ತಮವಾದ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಸಂವಿಧಾನವು ನಮಗೆ ಸ್ವಾತಂತ್ರ್ಯ, ಸಮಾನತೆ ಹಾಗೂ ಹಕ್ಕುಗಳನ್ನು ನೀಡಿದ್ದು, ನಾವು ದೇಶದ ಅಭಿವೃದ್ಧಿಗೆ ನಮ್ಮದೇ ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಜಾಥಾದಲ್ಲಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಿ, ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು ಮತ್ತು ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ಗ್ರಾಮ ಪಂಚಾಯಿತಿಗಳ ಜನಪ್ರತಿನಿಧಿಗಳು ಹಾಗೂ ಇನ್ನಿತರರು ಭಾಗವಹಿಸಿದ್ದರು.

# ಜೆಡಿಎಸ್‌ನಿಂದ ನೂತನ ಪದಾಧಿಕಾರಿಗಳ ನೇಮಕ



ಬೆಂಗಳೂರು: ಕರ್ನಾಟಕ ಪ್ರದೇಶ ಜನತಾದಳಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಿರುವ ಮಾಜಿ ಸಿಎಂ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷರಾದ ಹೆಚ್.ಡಿ. ಕುಮಾರಸ್ವಾಮಿ ಈ ಬಗ್ಗೆ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ.

ಐವರು ಕಾರ್ಯಾಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ. ಅಲ್ಕೊಡ್ ಹನುಮಂತಪ್ಪ, ಸಿ.ಬಿ.ಸುರೇಶ್ ಬಾಬು, ಭೀಮಗೌಡ ಬಸನಗೌಡ ಪಾಟೀಲ್, ಸಾ.ರಾ.ಮಹೇಶ್, ದೊಡ್ಡಪ್ಪಗೌಡ ಶಿವಲಿಂಗಪ್ಪಗೌಡ ನರಿಬೋಳ ಮುನ್ನಡೆಸಲಿದ್ದಾರೆ. ಹಿರಿಯ ಉಪಾಧ್ಯಕ್ಷರಾಗಿ ಡಾ.ಶ್ರೀನಿವಾಸ ಮೂರ್ತಿ, ರವೀಂದ್ರ ಶ್ರೀಕಂಠಯ್ಯ, ಸೋಮಣ್ಣ ಗೌಡ ಪಾಟೀಲ್, ಜ್ಯೋತಿ ಪ್ರಕಾಶ್ ಮಿರ್ಜಿ ಇರಲಿದ್ದಾರೆ. ಉಪಾಧ್ಯಕ್ಷರಾಗಿ ಕೆ.ಎಂ.ತಿಮ್ಮರಾಯಪ್ಪ, ರಾಜಾ ವೆಂಕಟಪ್ಪ ನಾಯಕ ದೊರೆ, ಕರೆಮ್ಮ ಜಿ..ನಾಯಕ, ಚೌಡರೆಡ್ಡಿ ತೂಪಲ್ಲಿ, ಸುನೀತಾ ಚೌಹಾಣ್, ಕೆ.ಬಿ ಪ್ರಸನ್ನ ಕುಮಾರ್, ಟಿ.ಎ ಶರವಣ ಆಯ್ಕೆಯಾಗಿದ್ದಾರೆ. ಮಹಾ ಪ್ರಧಾನ ಕಾರ್ಯದರ್ಶಿಯಾಗಿ ವೆಂಕಟರಾವ್ ನಾಡಗೌಡ, ಖಜಾಂಚಿಯಾಗಿ ಬಿ.ಎನ್.ರವಿಕುಮಾರ್ ನೇಮಕಗೊಂಡಿದ್ದಾರೆ. ಇದೇ ಸಾಲಿನಲ್ಲಿ ಪ್ರಧಾನ ಕಾರ್ಯದರ್ಶಿಗಳ ಪಟ್ಟಿ, ಕಾರ್ಯದರ್ಶಿಗಳು ಪಟ್ಟಿಯನ್ನೂ ಸಹ ಬಿಡುಗಡೆ ಮಾಡಿದ್ದಾರೆ.

# ವಿವಿಧೆಡೆ ವಿದ್ಯುತ್ ಫೆ.೦೭ ರಂದು

ಬಳ್ಳಾರಿ: ನಗರದ ಜೆಸ್ಕಾಂ ಉಪವಿಭಾಗ-1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲೀಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಫ್-34, ಎಫ್-40, ಎಫ್-73 ಎಫ್-72 ಫೀಡರ್‌ಗಳ ತುರ್ತು ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಫೆ.07 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 5 ಗಂಟೆಯವರೆಗೆ ನಗರದ ವಡ್ಡೆ ನಾಗಪ್ಪ ಲೇಔಟ್, ಮೊಹಮ್ಮದಿಯಾ ಸ್ಕೂಲ್, ರೇಡಿಯೋ ಪಾರ್ಕ, ಕೌಲ್ ಬಜಾರ್, ನಲಾ ಸ್ಟ್ರೀಟ್, ಪೊಲೀಸ್ ಸ್ಟೇಷನ್, ಉರ್ದು ಟ್ರೈನಿಂಗ್ ಸ್ಕೂಲ್, ಕಂಟೋನ್ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಐಶ್ವರ್ಯ ಕಾಲೋನಿ, ರೇಡಿಯೋ ಪಾರ್ಕ, ಕುವೆಂಪು ನಗರ, ಸುಧಾ ಕ್ರಾಸ್, ಕೋಟೆ ಏರಿಯಾ, ಇನ್ಫ್ಯಾಂಟ್ರಿ ರೋಡ್ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅಶೋಕ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಎಸ್‌ಎಂಸಿಎ ಅಧ್ಯಕ್ಷರಾಗಿ ಸತೀಶ್ ಕೃಷ್ಣ ಸೈಲ್ ರವರಿಂದ ಅಧಿಕಾರ ಸ್ವೀಕಾರ

ಬೆಂಗಳೂರು: ದೇಶದ ಜಾಹೀರಾತು ಕ್ಷೇತ್ರದಲ್ಲಿ ರಾಜ್ಯ ಸರ್ಕಾರದ ಏಕೈಕ ಸಂಸ್ಥೆಯಾದ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಸಂಸ್ಥೆಯ 29ನೇ ಅಧ್ಯಕ್ಷರಾಗಿ ಕಾರವಾರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಸತೀಶ್ ಕೃಷ್ಣ ಸೈಲ್ ರವರು ಪದಗ್ರಹಣ ಮಾಡಿದರು.

ಪದಗ್ರಹಣ ಸಮಾರಂಭದಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಸಿದ್ದಲಿಂಗಪ್ಪ ಬಿ. ಪೂಜಾರಿ ರವರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಮುಂದುವರೆದು ಶ್ರೀಯುತರು ಮಾಧ್ಯಮ



ಪ್ರತಿನಿಧಿಗಳ ಜೊತೆ ಮಾತನಾಡುತ್ತಾ ಈ ಹೆಮ್ಮೆಯ ಸಂಸ್ಥೆಗೆ ನನ್ನನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದಕ್ಕೆ ಕರ್ನಾಟಕ ಸರ್ಕಾರಕ್ಕೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ ಎಂದು ತಿಳಿಸಿದರು. ಕರ್ನಾಟಕ ಸರ್ಕಾರವು ಈ ಸಂಸ್ಥೆಯನ್ನು ಸರ್ವರೀತಿಯಲ್ಲೂ ಪ್ರಗತಿಪರವಾಗಿ ಮುನ್ನಡೆಸಲು ಸರ್ಕಾರವು ತಮಗೆ ವಹಿಸಿರುವ ಈ ಜವಾಬ್ದಾರಿಯನ್ನು ನಾನು ಅತ್ಯಂತ ಸಮರ್ಥವಾಗಿ ನಿರ್ವಹಿಸುತ್ತೇನೆ ಎಂಬ ಭರವಸೆಯನ್ನು ನೀಡಬಯಸುತ್ತೇನೆ ಎಂದು ಹೇಳಿದರು.

ಸಂಸ್ಥೆಯ ಅಭಿವೃದ್ಧಿಗೆ ಸರ್ಕಾರದಿಂದ ಆಗಬೇಕಾಗಿರುವ ಎಲ್ಲಾ ಸ್ತರದ ಕಾರ್ಯಗಳನ್ನು ಸಕಾಲದಲ್ಲಿ ಮಾಡಿಸುವುದರ ಜೊತೆ ಸರ್ಕಾರದ ಮಟ್ಟದ ಎಲ್ಲಾ ರೀತಿಯ ಬೆಂಬಲವನ್ನು ಪಡೆಯಲು ನಾನು ಅತ್ಯಂತ ಪ್ರಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ, ಇದು ನನ್ನ ಗುರಿ ಎಂದು ತಿಳಿಸಿದರು.

ಸಂಸ್ಥೆಯ ಅಭಿವೃದ್ಧಿಗೆ ಅಗತ್ಯವಾದ ವಿಚಾರಗಳ ಬಗ್ಗೆ ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗ್ರಾಹಕರುಗಳ ಜೊತೆ ಚರ್ಚಿಸಿ ಅವರುಗಳ ನಿರೀಕ್ಷೆಯಂತೆ ಕಾರ್ಯ ನಿರ್ವಹಿಸಿ, ಸಂಸ್ಥೆಯ ಸರ್ವತೋಮುಖ ಅಭಿವೃದ್ಧಿಯ ಜೊತೆ ಸಮಾಜಮುಖಿ ಕೆಲಸ ಮಾಡುವುದರಲ್ಲಿಯೂ ತೊಡಗಿಸಿಕೊಳ್ಳುವುದಾಗಿ ತಿಳಿಸಿದರು.

ಕಾರವಾರ, ಅಂಕೋಲಾ ವಿಧಾನಸಭಾ ಕ್ಷೇತ್ರದ ಮುಖಂಡರು, ಅಭಿಮಾನಿಗಳು ಸೇರಿದಂತೆ ಬಹುಸಂಖ್ಯೆಯ ಕಾರ್ಯಕರ್ತರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಅತ್ಯಂತ ಶ್ರೇಷ್ಠ ಪ್ರಜಾಪ್ರಭುತ್ವವನ್ನು ಹೊಂದಿರುವ ದೇಶ ಭಾರತ: ಬಿ ವೈ ವಿಜಯೇಂದ್ರ

ಶಿವಮೊಗ್ಗ: ಜಗತ್ತಿನಲ್ಲೇ ಅತ್ಯಂತ ಶ್ರೇಷ್ಠ ಪ್ರಜಾಪ್ರಭುತ್ವವನ್ನು ಹೊಂದಿರುವ ದೇಶ ನಮ್ಮ ಭಾರತ ಎಂದು ಶಾಸಕರಾದ ಬಿ ವೈ ವಿಜಯೇಂದ್ರ ಅವರು ತಿಳಿಸಿದರು.

ಶಿಕಾರಿಪುರ ತಾಲೂಕಿನ ಮತ್ತಿಕೋಟೆ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ,ವಿವಿಧ ಇಲಾಖೆಯ ಸಹಯೋಗದೊಂದಿಗೆ ಫೆ.04 ರಂದು ಆಯೋಜಿಸಲಾಗಿದ್ದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನಕ್ಕೆ ಅಡಿಪಾಯವನ್ನು ಹಾಕಿಕೊಟ್ಟವರು ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾಗಿದ್ದ

ಡಾ. ಬಿ ಆರ್ ಅಂಬೇಡ್ಕರ್ರವರು. ಇಡೀ ವಿಶ್ವದಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ



ದೇಶ ನಮ್ಮದು. ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ನಮ್ಮಂತಹ ದೊಡ್ಡ ರಾಷ್ಟ್ರದಲ್ಲಿ ಪ್ರಜಾಪ್ರಭುತ್ವವನ್ನು ಯಶಸ್ವಿಯಾಗಿ ಜಾರಿಗೆ ತರಲು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿಆರ್ ಅಂಬೇಡ್ಕರ್ ಅವರ ಪಾತ್ರ ಅತ್ಯಂತ ಅಮೂಲ್ಯವಾಗಿದೆ ಅವರು ಹಾಕಿಕೊಟ್ಟ ಸಂವಿಧಾನದ ಅಡಿಯಲ್ಲಿ ನಾವೆಲ್ಲರೂ ಜೀವಿಸುತ್ತಿದ್ದೇವೆ.

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದ ಮೂಲಕ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಕೂಡ ಸಮಾನ ನ್ಯಾಯವನ್ನು ಒದಗಿಸುವ ಉದ್ದೇಶವನ್ನು ಸಂವಿಧಾನವು ಹೊಂದಿದೆ. ಈ ನಿಟ್ಟಿನಲ್ಲಿ ಸಂವಿಧಾನ ಜಾಗೃತಿ ಜಾಥಾ ರಥಯಾತ್ರೆ ಪ್ರತಿ ಹಳ್ಳಿ ಹಳ್ಳಿಗೂ ಸಂಚರಿಸಿ ಜಾಗೃತಿಯನ್ನು ಮೂಡಿಸಲಿದ್ದು ಅತಿ ಮುಖ್ಯವಾಗಿ ವಿದ್ಯಾರ್ಥಿಗಳು ಹಾಗೂ ಸಮಾಜದ ನಾಗರೀಕರು ಇದರ ಅರಿವನ್ನು ಪಡೆದುಕೊಳ್ಳುವುದು ಅತಿ ಅವಶ್ಯಕವಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕ್ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಪರಮೇಶ್ವರ್, ಗ್ರಾಮ ಪಂಚಾಯತಿ ಅಧ್ಯಕ್ಷೆ ರಂಜಿತ, ಮುಖಂಡರಾದ ಹೆಚ್ ಟಿ ಬಳಿಗಾರ್, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಊರಿನ ಗ್ರಾಮಸ್ಥರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕುದುರೆ ಮೇಲೆ ಗಸ್ತು ತಿರುಗಿದ ಪೊಲೀಸರು

ಬೆಂಗಳೂರು: ಮೈಸೂರು ಮಾದರಿಯಲ್ಲೇ ಇದೀಗ ಬೆಂಗಳೂರಿನಲ್ಲೂ ಕುದುರೆ ಬಳಕೆ ಮಾಡಿಕೊಂಡು ಪೊಲೀಸರು ಗಸ್ತು ತಿರುಗಲು ಆರಂಭಿಸಿದ್ದಾರೆ.

ಭಾರೀ ಜನದಟ್ಟಣೆಯಿಂದಾಗಿ ಬೆಂಗಳೂರು ನಗರದ ಆಯ್ದ ಕೆಲವು ರಸ್ತೆಗಳಲ್ಲಿ ಪ್ರತಿ ವಾರಾಂತ್ಯದಲ್ಲಿ ಅಶ್ವಾರೋಹಿ ಪೊಲೀಸರು ಗಸ್ತು ತಿರುಗುತ್ತಿದ್ದಾರೆ. ಈ ಬಗ್ಗೆ ಬೆಂಗಳೂರು ಪಾವ್ ಪೆಟ್ರೋಲ್ ಹಂಚಿಕೊಂಡಿದ್ದ ಪೋಸ್ಟ್ ಅನ್ನು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಅವರು ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ.

ಎಕ್ಸ್‌ನಲ್ಲಿ ಏನಿದೆ? ಪ್ರತಿ ವಾರಾಂತ್ಯದಲ್ಲಿ, ನಮ್ಮ ಅಶ್ವರೋಹಿ ಪೊಲೀಸರು ಕುದುರೆಗಳ ಮೇಲೆ ಗಸ್ತು ತಿರಗಲಿದ್ದಾರೆ. ನಿನ್ನೆ ವಿಧಾನಸೌಧ ಮತ್ತು ಕಬ್ಬನ್ ಪಾರ್ಕ್‌ನಲ್ಲಿ ಕಟ್ಟೆಚ್ಚರ ವಹಿಸಿ ನಗರದ ಮೂಲೆ ಮೂಲೆಗಳಲ್ಲಿ ಕಟ್ಟೆಚ್ಚರ ವಹಿಸಿದ್ದರು. ನಮ್ಮ ನಗರ, ನಮ್ಮ ಜವಾಬ್ದಾರಿ ಎಂದು ತಿಳಿಸಿದ್ದಾರೆ.

ಈ ಹಿಂದೆ ಅಶ್ವರೋಹಿ ಪೊಲೀಸರ ಕುರಿತು ಮಾಹಿತಿ ನೀಡಿದ್ದ ಅವರು, ಜನದಟ್ಟಣೆ ನಡುವೆ ಅನುಚಿತ ವರ್ತನೆ



ತೋರುವ ಹಾಗೂ ಅಪರಾಧ ಕೃತ್ಯಗಳನ್ನು ಎಸಗುವವರ ಮೇಲೆ ಹದ್ದಿನ ಕಣ್ಣಿಡಲು ಅಶ್ವಾರೋಹಿ ಪೊಲೀಸ್ ಗಸ್ತು ಆಯ್ದ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲಿದೆ. ಕಬ್ಬನ್ ಉದ್ಯಾನ, ವಿಧಾನಸೌಧ, ಮೆಜೆಸ್ಟಿಕ್, ಎಂಜಿ ರಸ್ತೆ ಮತ್ತು ಚರ್ಚ್ ಸ್ಟ್ರೀಟ್‌ಗಳಲ್ಲಿ ಪ್ರಾಯೋಗಿಕವಾಗಿ ಅಶ್ವಾರೋಹಿ ಪೊಲೀಸರು ಗಸ್ತು ನಡೆಸಲಿದ್ದಾರೆ ಎಂದು ಹೇಳಿದ್ದರು.

ಇದರ ಜೊತೆಗೆ ಅಶ್ವಾರೋಹಿ ಪೊಲೀಸರ ಗಸ್ತು ನಿರ್ವಹಣೆಗಾಗಿ ಎಸ್‌ಪಿ ದರ್ಜೆಯ ಅಧಿಕಾರಿಯೊಬ್ಬರನ್ನು ನಿಯೋಜನೆ ಮಾಡಲಾಗುತ್ತದೆ. ಗಸ್ತು ಮಾಡಲು ಮೈಸೂರಿನಿಂದ ತರಬೇತಿ ಪಡೆದ ಒಂದು ತುಕಡಿಯನ್ನು ಕರೆಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದರು.

## ಸರ್ಕಾರಿ ಕೆರೆಯನ್ನೇ ನುಂಗಿದ ಗ್ರಾಪ ಮಾಜಿ ಸದಸ್ಯ

ಯಾದಗಿರಿ: ಮಾಜಿ ಗ್ರಾ.ಪಂ ಸದಸ್ಯನ ವಿರುದ್ಧ ಸರ್ಕಾರಿ ಭೂಮಿಯನ್ನು ಕಬಳಿಕೆ ಮಾಡಿದ ಆರೋಪ ಕೇಳಿಬಂದಿದೆ. ಅಭಿಮನ್ಯು ಎಂಬಾತ ಕೆರೆ ನೀರು ಖಾಲಿ ಮಾಡಿ ಜಮೀನಿನಲ್ಲಿ ವಾಣಿಜ್ಯ ಬೆಳೆ ಬೆಳೆದಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಗುರುಮಿಠಕಲ್ ತಾಲೂಕಿನ ಬದ್ದೇಪಲ್ಲಿ ಗ್ರಾಮದಲ್ಲಿ ಈ ಘಟನೆ ಬೆಳಕಿಗೆ ಬಂದಿದೆ. ಮಾಜಿ ಗ್ರಾ.ಪಂ ಸದಸ್ಯನ ಅಭಿಮನ್ಯು ಮೇಲೆ ಈ ಆರೋಪ ಕೇಳಿಬಂದಿದೆ. ಬರೋಬ್ಬರಿ 120 ಎಕರೆ



ಸರ್ಕಾರಿ ಜಮೀನು ಕಬಳಿಕೆ ಆರೋಪ ಮಾಡಲಾಗಿದೆ.

ಅಭಿಮನ್ಯು 15 ವರ್ಷದಿಂದ ಗ್ರಾಮದ ಕೆರೆ ಒತ್ತುವರಿ ಮಾಡಿ ವಾಣಿಜ್ಯ ಬೆಳೆ ಬೆಳೆಯುತ್ತಿದ್ದು, ಲಕ್ಷ ಲಕ್ಷ ಹಣ ಪಡೆದು ಆಂಧ್ರ ಮೂಲದ ವ್ಯಕ್ತಿಗೆ ಲೀಜ್ ಗೆ ನೀಡಿದ್ದಾರಂತೆ. ಇದನ್ನು ಪ್ರಶ್ನಿಸಲು ಹೋದ ಗ್ರಾಮಸ್ಥರ ಮೇಲೆ ದಬ್ಬಾಳಿಕೆ ಆರೋಪ ಕೇಳಿಬಂದಿದೆ. ಹೀಗಾಗಿ ಸರ್ಕಾರಿ ಭೂಮಿ ವಶಕ್ಕೆ ಪಡೆಯಲು ಜಿಲ್ಲಾಧಿಕಾರಿ ತಹಶೀಲ್ದಾರರಿಗೆ ಗ್ರಾಮಸ್ಥರು ಮನವಿ ಮಾಡಿಕೊಂಡಿದ್ದಾರೆ. ಅತ್ತ ಮನವಿ ನೀಡಿದರೂ ಸಹ ಅಧಿಕಾರಿಗಳು ಕ್ಯಾರೇ ಎನ್ನುತ್ತಿಲ್ಲ ಎಂದು ಗ್ರಾಮಸ್ಥರು ಹೇಳುತ್ತಿದ್ದಾರೆ.

## ನನ್ನ ನಿಲುವು ಸ್ಪಷ್ಟ,ನಾನು ಬಿಜೆಪಿಗೆ ಹೋಗಲ್ಲ: ಶಾಸಕ ಸವದಿ ಸ್ಪಷ್ಟನೆ

ಬೆಳಗಾವಿ: ನಾನು ಯಾವುದೇ ಕಾರಣಕ್ಕೂ ಬಿಜೆಪಿಗೆ ಹೋಗುವುದಿಲ್ಲ ಎಂದು ಅಥಣಿ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಸ್ಪಷ್ಟಪಡಿಸಿದರು.

ಜಿಲ್ಲೆಯ ಅಥಣಿ ತಾಲೂಕಿನ ಯಕ್ಕಂಚಿ ಗ್ರಾಮದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನಾನು ಬಿಜೆಪಿಗೆ ಸೇರ್ಪಡೆಯಾಗಿ, ಬೀದರ್ ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆ ಮಾಡುತ್ತೇನೆ ಎನ್ನುವ ಮಾಧ್ಯಮಗಳಲ್ಲಿನ ಸುದ್ದಿ ನನಗೆ ಅಚ್ಚರಿ ಮೂಡಿಸಿದೆ. ಎತ್ತಣ ಮಾಮರ



ಎತ್ತಣ ಕೋಗಿಲೆ ಎತ್ತಿಂದ ಎತ್ತ ಸಂಬಂಧವಯ್ಯಾ? ಆ ಸುದ್ದಿ ಎಲ್ಲವೂ ಸುಳ್ಳು ಎಂದು ಬಿಜೆಪಿ ಸೇರ್ಪಡೆಯನ್ನು ಅಲ್ಲಗಳೆದರು.

ನಾನು ಕಾಂಗ್ರೆಸ್ ಬಿಟ್ಟು ಹೋಗಿಲ್ಲ. ನನಗೆ ಅಥಣಿ ಕ್ಷೇತ್ರದ ಜನರು ಶಾಸಕರಾಗಿ ಇರುವಂತೆ ಆದೇಶ ಮಾಡಿದ್ದಾರೆ. ನಾನು ಶಾಸಕನಾಗೇ ಇರುತ್ತೇನೆ. ನಾನು ಯಾವುದೇ ಕಾರಣಕ್ಕೂ ಲೋಕಸಭಾ ಚುನಾವಣೆ ಸ್ಪರ್ಧೆ ಮಾಡುವುದಿಲ್ಲ ಎಂದು ತಿಳಿಸಿದರು.

## 15ರಂದು ಬೆಳಗಾವಿ ಮೇಯರ್-ಉಪಮೇಯರ್ ಚುನಾವಣೆ

ಬೆಳಗಾವಿ: ಮಹಾನಗರ ಪಾಲಿಕೆಯ ಮೇಯರ್-ಉಪಮೇಯರ್ ಮೊದಲನೇ ಅವಧಿ ಸೋಮವಾರಕ್ಕೆ ಮುಕ್ತಾಯವಾಗಿದೆ. ಎರಡನೇ ಅವಧಿಗೆ ಮೇಯರ್ -ಉಪಮೇಯರ್ ಆಯ್ಕೆ ಪ್ರಕ್ರಿಯೆ ಫೆ. 15ರಂದು ನಡೆಯಲಿದೆ.

ಪಾಲಿಕೆ ಚುನಾವಣಾಧಿಕಾರಿ ಆಗಿರುವ ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತರು ಸೋಮವಾರ ಚುನಾವಣಾ ಅಧಿಸೂಚನೆ ಹೊರಡಿಸಿದ್ದಾರೆ. ಫೆ. 15ರಂದು ಬೆಳಗ್ಗೆ 9 ಗಂಟೆಯಿಂದ ನಾಮಪತ್ರ ಸ್ವೀಕಾರ ನಡೆಯಲಿದೆ. ಮಧ್ಯಾಹ್ನ 1 ಗಂಟೆ ನಂತರ ಮೇಯರ್-ಉಪಮೇಯರ್ ಆಯ್ಕೆ ಪ್ರಕ್ರಿಯೆ ನಡೆಸಲು ನಿರ್ಧರಿಸಲಾಗಿದೆ. ಎರಡನೇ ಅವಧಿಗೆ ಮೇಯರ್ ಎಸ್‌ಸಿ ಮಹಿಳಾ ವರ್ಗ ಹಾಗೂ ಉಪಮೇಯರ್ ಸ್ಥಾನಕ್ಕೆ ಸಾಮಾನ್ಯ ವರ್ಗ ಮೀಸಲಿಡಲಾಗಿದೆ.ಮೊದಲನೇ ಅವಧಿಗೆ ಇದ್ದ ಮೇಯರ್ ಶೋಭಾ ಸೋಮನಾಚೆ ಹಾಗೂ ಉಪಮೇಯರ್ ರೇಷ್ಮಾ ಪಾಟೀಲ ಅವರ ಅವಧಿ ಸೋಮವಾರಕ್ಕೆ ಮುಕ್ತಾಯಗೊಂಡಿದೆ.

# ಸಾರ್ವಜನಿಕರ ಗಮನಕೆ

ಬೆಳಗಾವಿ: ಬೆಳಗಾವಿ ನಗರಕ್ಕೆ ಸರಬರಾಜಾಗುವ ಕಚ್ಚಾ ನೀರಿನ ಕೊಳವೆಯಲ್ಲಿ ರೇವ್ ನಗರದ ಹತ್ತಿರ ಸೋರಿಕೆವುಂಟಾಗಿದ ಕಾರಣ ದುರಸ್ತಿ ಕಾರ್ಯ ಫೆ. 6 ರಂದು ಕೈಗೊಳ್ಳಲಾಗಿದೆ. ಆದರಿಂದ ನಗರದ ಕೇಲವು ಭಾಗದಲ್ಲಿ ಫೆ. 7 ರಂದು ನೀರಿನ ವ್ಯತ್ಯಯ ಆಗಲಿದೆ ಎಂದು ತಿಳಿಸಲಾಗಿದೆ.

ಉತ್ತರ ಹಾಗೂ ದಕ್ಷಿಣ ಪ್ರದೇಶಗಳಾದ ಆರ್.ಸಿ.ನಗರ ಮೊದಲನೇ & ಎರಡನೇ ಹಂತದ ಪ್ರದೇಶಗಳಾದ ಟಿಲಕವಾಡಿ, ನಾನಾವಾಡಿ, ವಡಗಾವಿ, ಶಹಾಪೂರ, ದಕ್ಷಿಣ ಪ್ರಾತ್ಯಕ್ಷಿಕ ವಲಯ, ಹಿಂದವಾಡಿ, ಮಜಗಾವಿ, ಬ್ರಹ್ಮನಗರ ,ಗೋಕುಲ ನಗರ, ಹುಲಬಟ್ಟಿ ಕಾಲೋನಿ, ಎಸ್‌ಪಿಎಂ ರಸ್ತೆ, ಸಂತಸೇನಾ ರಸ್ತೆ, ಜೈನ ಬಸ್ತಿ, ಖಾಜಿಲೈನ್. ಕಾಕತಿವೇಸ್.ಕಂಗ್ರಾಳಗಲ್ಲಿ, ಕೋನವಾಲ ಗಲ್ಲಿ, ರಾಮಲಿಂಗಖಿಂಡ ಗಲ್ಲಿ, ಖಂಜಾರಗಲ್ಲಿ, ಖಡೇ ಬಜಾರ, ಭಗವಾನಗಲ್ಲಿ, ದರಬಾರಗಲ್ಲಿ, ಕೊತ್ವಾಲಗಲ್ಲಿ, ಶೆಟ್ಟಿಗಲ್ಲಿ, ಬುಖಾರಿಗಲ್ಲಿ, ಕಸಾಯಿಗಲ್ಲಿ, ಮಾಳಿಗಲ್ಲಿ, ಆಜಾದ್‌ಗಲ್ಲಿ, ಭೋವಿಗಲ್ಲಿ, ಪೊಂಗಳಗಲ್ಲಿ, ಬಸವನಗಲ್ಲಿ, ಚಂದುಗಲ್ಲಿ, ಫೀಗಲ್ಲಿ, ತೆಂಗಿನಕರಗಲ್ಲಿ, ಮೋಮೀನಗಲ್ಲಿ, ಅಶೋಕ ನಗರ, ಆಜಾದ್‌ಖಾನ್ ಸೋಸೈಟಿ, ವೀರಭದ್ರ ನಗರ, ಶಿವಾಜಿನಗರ, ಪಂಜಿಬಾಬ, ಪೋಲಿಸ್ ಹೆಡ್ ಕ್ವಾರ್ಟರ್ಸ್, ಸುಭಾಸ ನಗರ, ಅಯೋಧ್ಯಾ ನಗರ ಹಾಗೂ ಅಂಜುಮನ್ ನಗರಗಳಲ್ಲಿ ನೀರಿನ ವ್ಯತ್ಯಯ ಆಗಲಿದೆ.

ಸಾರ್ವಜನಿಕರು ಇದಕ್ಕೆ ಸಹಕರಿಸಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕದ ಸಮಗ್ರ, ಸುವರ್ಣ ಅಭಿವೃದ್ಧಿಗೆ ನಮ್ಮ ಬದ್ಧತೆ, ಆದ್ಯತೆ: ನೀಡಿದ ಭರವಸೆ ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದೇವೆ: ಸಚಿವ ಸಂತೋಷ ಲಾಡ್

ಧಾರವಾಡ: ನಮ್ಮ ನಾಯಕರು ಚುನಾವಣೆ ಪೂರ್ವದಲ್ಲಿ ರಾಜ್ಯದ ಜನತೆಗೆ ನೀಡಿದ ಭರವಸೆ ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಜಿಲ್ಲಾಡಳಿತ, ಹು-ಧಾ ಮಹಾನಗರ ಪಾಲಿಕೆ ಸಹಯೋಗದಲ್ಲಿ ನಗರದ ಕೆಸಿಡಿ ಮೈದಾನದಲ್ಲಿ ಸೋಮವಾರ ನಡೆದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ರೂ.1,058 ಕೋಟಿ ವೆಚ್ಚದಲ್ಲಿ ಗ್ಯಾರಂಟಿ ಯೋಜನೆ ಮೂಲಕ ರಾಜ್ಯದ ಜನತೆಗೆ ವಿವಿಧ ಸೌಲಭ್ಯ ತಲುಪಿಸುವ ಕೆಲಸವನ್ನು ರಾಜ್ಯ ಸರಕಾರ ಮಾಡಿದೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರ ಶಕ್ತಿ ಯೋಜನೆ ಮೂಲಕ ದೇವರ ದರ್ಶನಕ್ಕೆ ಅವಕಾಶ ಕಲ್ಪಿಸಿದೆ. ಈ ಯೋಜನೆಗೆ ಮೆಚ್ಚುಗೆ ವ್ಯಕ್ತಪಡಿಸಿ ಧರ್ಮಸ್ಥಳದ ನಡೆದಾಡುವ ದೇವರ ಡಾ.ವೀರೇಂದ್ರ ಹೆಗ್ಗಡೆ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ ಎಂದರು.

ಹಿಂದು ಬಿಲ್ ಕೋಡ್ ತಂದಿದ್ದೇ ಡಾ.ಅಂಬೇಡ್ಕರ್. ಈ ಕಾನೂನು ಜಾರಿಗೆ ತಂದ ಕಾರಣಕ್ಕೆ ಇಂದು ಎಲ್ಲರಿಗೂ ಹಿರಿಯರ ಆಸ್ತಿ ಲಭಿಸುತ್ತದೆ ಎಂದು ಹೇಳಿದರು. ರಾಜ್ಯ ಕಾಂಗ್ರೆಸ್ ಸರಕಾರ ಬಡವರ ಪರ ಇದೆ. ಇದೇ ಕಾರಣಕ್ಕೆ 1058 ಕೋಟಿ ಯೋಜನೆ ಜನರಿಗೆ ನೀಡಿದೆ ಎಂದು ತಿಳಿಸಿದರು.

**ಇದೊಂದು ಐತಿಹಾಸಿಕ ಕಾರ್ಯಕ್ರಮ:** ಇದು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮವಾಗಿದೆ.



ಧಾರವಾಡ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಒಟ್ಟು 3,54,437 ಮಹಿಳಾ ಫಲಾನುಯಭವಿಗಳು ಇದರ ಸದುಪಯೋಗವನ್ನು ಪಡೆದುಕೊಂಡಿದ್ದು, ಈ ಯೋಜನೆಯಡಿಯಲ್ಲಿ ರೂ. 354.43 ಅನುದಾನವನ್ನು ವಿತರಿಸಲಾಗಿದೆ.

ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ ಜನೇವರಿ ಅಂತ್ಯದವರೆಗೆ ಒಟ್ಟು 4,39,278 ಗೃಹ ಬಳಕೆದಾರರು ಈ ಯೋಜನೆಯನ್ನು ಪಡೆದುಕೊಂಡಿದ್ದು, ಇದಕ್ಕಾಗಿ ಇಲಾಖೆಯು ರೂ.30.96 ಕೋಟಿ ಅನುದಾನ ವನ್ನು ವಿನಿಯೋಗಿಸಿದೆ. ನಮ್ಮ ಜಿಲ್ಲೆಯ ಮಹಿಳೆಯರು ಈ ಶಕ್ತಿ ಯೋಜನೆಯನ್ನು ಅತ್ಯಂತ ಹರ್ಷದಿಂದ ಸ್ವಾಗತಿಸಿದ್ದು, ಇದರ ಸದುಪಯೋಗವನ್ನು ಜಿಲ್ಲೆಯಲ್ಲಿ ಒಟ್ಟು 7.39 ಕೋಟಿ ಮಹಿಳಾ ಫಲಾನುಭವಿಗಳು ಉಚಿತವಾಗಿ ಸರಕಾರಿ ಬಸ್ ಗಳಲ್ಲಿ ಓಡಾಡುತ್ತಿದ್ದು, ಇದರಿಂದಾಗಿ ರೂ. 149.64 ಕೋಟಿ ಅನುದಾನದ ಸೇವೆ ಬಳಕೆಯಾಗಿದೆ.

ಅನ್ನಭಾಗ್ಯ ಯೋಜನೆಯು ಬಡವರ, ದೀನದಲಿತರ ಆಶಾ ಸಂಜೀವಿನಿಯಾಗಿ ಹೊರಮೊಮ್ಮಿದೆ. ಈ ಯೋಜನೆಯನ್ನು ಜಿಲ್ಲೆಯಲ್ಲಿ ಡಿಸೆಂಬರ ತಿಂಗಳ ಅಂತ್ಯದವರೆಗೆ 3,37,117 ಕುಟುಂಬಗಳು ಬಳಸಿಕೊಂಡಿದ್ದು, ಇದಕ್ಕಾಗಿ ನಮ್ಮ ಸರಕಾರದಿಂದ ರೂ. 112.39 ಕೋಟಿ ಬಳಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ತಿಳಿಸಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾವೇಶದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಸ್ವಾಗತಿಸಿದರು. ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ, ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಪಾಲಿಕೆ ಸದಸ್ಯರಾದ ಡಾ.ಮಯೂರ ಮೋರೆ, ಕವಿತಾ ಕಬ್ಬೇರ, ಶಂಭು ಸಾಲಮನಿ ಸೇರಿದಂತೆ ಇತರರು ಇದ್ದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಗುರುಕುಲ ಸಂಗೀತ ಶಾಲೆಯ ವಿದ್ಯರ್ಥಿಗಳಾದ ಜ್ಞಾನೇಶ ಹಾಗೂ ಓಂಕಾರ ಇವರಿಂದ ಗೀತಗಾಯನ ಮಾಡಿದರು. ಶೃತಿ ಹಾಗೂ ಶ್ರೀಕಾಂತ ಕುಲಕರ್ಣಿ ಮತ್ತು ತಂಡದಿಂದ ಭಾವಗೀತೆ ಜರುಗಿತು.


## ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಕಛೇರಿ, ಸಮಗ್ರ ಶಿಕ್ಷಣ ಕರ್ನಾಟಕ - ಚಿಕ್ಕೋಡಿ

ಸಂಖ್ಯೆ: ಸಶಿಅ/ಎಸ್.ಆರ್.ಪಿ/ಕೋ.ಟೆಂಡರ್/2023-24 ದಿನಾಂಕ: 06/02/2024

**ಪ್ರಕಟಣೆ**

2022-23 ನೇ ಸಾಲಿಗೆ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ PAB ಅನುಮೋದಿತ ಸಮನ್ವಯ ಶಿಕ್ಷಣ ಮಧ್ಯವರ್ತನಾ ಚಟುವಟಿಕೆ ಸಂಬಂಧಿತ ಕಾರ್ಯಕ್ರಮಗಳಡಿಯಲ್ಲಿ ಸಂಪನ್ಮೂಲ ಕೇಂದ್ರಗಳ ಬಲವರ್ಧನೆಗಾಗಿ ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳ ಫಿಜಿಯೋಥೆರಪಿ ಮತ್ತು ಕಲಿಕಾ ಚಟುವಟಿಕೆಗಳ ಆಯೋಜನೆಗಾಗಿ ಚಿಕ್ಕೋಡಿ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಗೋಕಾಕ ಹಾಗೂ ಚಿಕ್ಕೋಡಿ ವಲಯಗಳ ಎಸ್.ಆರ್.ಪಿ ಕೇಂದ್ರಗಳಿಗೆ ಅವಶ್ಯವಿರುವ ಸಾಮಗ್ರಿಗಳನ್ನು ಖರೀದಿಸಿ ಪೂರೈಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999, ನಿಯಮಗಳು 2000 ರ ಪ್ರಕಾರ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಮ್ಯಾನ್ಯುವಲ್ ಟೆಂಡರ ಮೂಲಕ ಕರೆಯಲಾಗಿದೆ. ಪ್ರಯುಕ್ತ ರೂ. 500/- ಡಿ.ಡಿ ಯನ್ನು DPO, SSA Chikkodi ರವರ ಹೆಸರಿನಲ್ಲಿ ಪಡೆದು ಈ ಕಛೇರಿಗೆ ಸಲ್ಲಿಸಿ ಅರ್ಜಿ ನಮೂನೆಯನ್ನು ಪಡೆಯ ಬಹುದಾಗಿದೆ. ಟೆಂಡರ್ ಅರ್ಜಿಯನ್ನು ದಿನಾಂಕ: 06-02-2024 ರಿಂದ 15-02-2024 ರವರೆಗೆ ಮಧ್ಯಾಹ್ನ 3-00 ಗಂಟೆಯವರೆಗೆ ಉಪನಿರ್ದೇಶಕರ ಕಚೇರಿ ಶಾಲಾ ಶಿಕ್ಷಣ ಮತ್ತು ಪದನಿಮಿತ್ತ ಜಿಲ್ಲಾ ಯೋಜನಾಸಮನ್ವಯಾಧಿಕಾರಿಗಳು ಸಮಗ್ರ ಶಿಕ್ಷಣ ಕರ್ನಾಟಕ ಚಿಕ್ಕೋಡಿರವರ ಕಛೇರಿಯಲ್ಲಿ ಟೆಂಡರ್ ಬಾಕ್ಸನಲ್ಲಿ ಹಾಕುವುದು. ದಿನಾಂಕ: 15-02-2024 ರವರೆಗೆ ಸಂಜೆ : 5-00 ಗಂಟೆಗೆ ಮಾನ್ಯ ಉಪನಿರ್ದೇಶಕರು ಕಚೇರಿ ಶಾಲಾ ಶಿಕ್ಷಣ ಮತ್ತು ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಸಮಗ್ರ ಶಿಕ್ಷಣ ಕರ್ನಾಟಕ ಚಿಕ್ಕೋಡಿ ಕಛೇರಿಯಲ್ಲಿ ಟೆಂಡರನ್ನು ತೆರೆಯಲಾಗುವುದು. ಹೆಚ್ಚಿನ ವಿವರಗಳಿಗಾಗಿ ಕಛೇರಿ ದೂರವಾಣಿ ಸಂಖ್ಯೆ:9448999335/ 9448999432 ಗೆ ಸಂಪರ್ಕಿ ಸಬಹುದಾಗಿದೆ.

ಸಹಿ/-ಉಪನಿರ್ದೇಶಕರು,
ಶಾಲಾ ಶಿಕ್ಷಣ ಇಲಾಖೆ ಹಾಗೂ ಪದನಿಮಿತ್ತ
ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು,
ಸಮಗ್ರ ಶಿಕ್ಷಣ ಕರ್ನಾಟಕ ಚಿಕ್ಕೋಡಿ

DIPR/BGM/RO-NO-1065/KSMCA/2023-24

# ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಹುಮಾನ ವಿತರಣೆ

## ರಾಷ್ಟ್ರಪಿತ ಮಹಾತ್ಮ ಗಾಂಧೀಜಿ 154ನೇ ಜಯಂತಿ ನಿಮಿತ್ತ ಆಯೋಜನೆ ರಾಜ್ಯದಾದ್ಯಂತ 12 ಸಾವಿರ ವಿದ್ಯಾರ್ಥಿಗಳು ಭಾಗಿ

ಬೆಳಗಾವಿ: ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ,ಸರಳತೆ,ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗೆ ನಡೆಸಿದ ಪ್ರಯೋಗಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ನಿಮಿತ್ತ ಆಯೋಜಿಸಿದ್ದ ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಹುಮಾನಗಳನ್ನು ವಿತರಿಸಿದರು.



ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತ 9 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳು,ಸ್ಮರಣಿಕೆ ಹಾಗೂ ಗಾಂಧೀಜಿ ಅವರ ಜೀವ ಸಂದೇಶಗಳ ಕುರಿತು ಪುಸ್ತಕಗಳನ್ನು ವಿತರಿಸಿ ಶುಭಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಜೀವನ-ಸಂದೇಶ ಹಾಗೂ ಅವರು ಸವೆಸಿದ ಹಾದಿ ಹಾಗೂ ಅವರು ಜೀವನದುದ್ದಕ್ಕೂ ಪಾಲಿಸಿಕೊಂಡು ಆದರ್ಶಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸುಮಾರು 12 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿರುವುದು ಸಂತಸದ ಸಂಗತಿ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳಕರ್ ಅವರು ಮಾತನಾಡಿ, ಗಾಂಧೀಜಿಯವರ ಜನ್ಮದಿನದ ನಿಮಿತ್ತ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ, ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ,ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು. ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳುಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ವಿಷಯಗಳಿಗೆ ಸಂಬಂಧಿಸಿದಂತೆ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು ಎಂದರು.

ಜಿಲ್ಲಾಮಟ್ಟದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಜಿಲ್ಲಾ ಹಂತದಲ್ಲಿಯೇ ಬಹುಮಾನ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು ಎಂದರು.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳ ಪ್ರಬಂಧಗಳನ್ನು ರಾಜ್ಯ ಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು. ಮೂರು ವಿಭಾಗಗಳಲ್ಲಿ ಪ್ರತ್ಯೇಕವಾಗಿ ಪ್ರಥಮ ಸ್ಥಾನ-31,000, ದ್ವಿತೀಯ-21,000 ಹಾಗೂ ತೃತೀಯ-11,000 ರೂ.ಗಳ ನಗದು ಪುರಸ್ಕಾರ ನೀಡಲಾಯಿತು.

ವಿಜೇತರ ವಿವರ: ಪ್ರೌಢಶಾಲೆ ವಿಭಾಗದಲ್ಲಿ ಪ್ರಥಮ-ಅನಿರುದ್ಧ ಮನೋಜ್, ಸಂತ ಅನ್ನಮ್ಮ ಪ್ರೌಢಶಾಲೆ, ವಿರಾಜಪೇಟೆ,ಕೊಡಗು ಜಿಲ್ಲೆ, ದ್ವಿತೀಯ-ಹರ್ಷಿತ ಎನ್, ಸರ್ಕಾರಿ ಪ್ರೌಢಶಾಲೆ, ತುಂಗಣಿ, ಕನಕಪುರ ತಾ. ರಾಮನಗರ ಜಿಲ್ಲೆ, ತೃತೀಯ - ತೋಹಿದ್ ಅಹ್ಮದ್ ಲಾಡಜಿ, ಗೈಡ್ ಆಂಗ್ಲ ಮಾಧ್ಯಮ ಶಾಲೆ, ತಿಳವಳ್ಳಿ, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ.

ಪದವಿ ಪೂರ್ವ ವಿಭಾಗದಲ್ಲಿ ಪ್ರಥಮ-ಹೃತ್ಪೂರ್ವಕ್ ಕೆ.ಎಸ್. ಸಂತ ಮೈಕೇಲ್ ಕಾಲೇಜು, ಮಡಿಕೇರಿ ಕೊಡಗು ಜಿಲ್ಲೆ, ದ್ವಿತೀಯ-ಉದಯಕುಮಾರ್ ಎಂ.ಎಸ್. ಸರ್ಕಾರಿ ಪ.ಪೂ.ಕಾಲೇಜು ಮಂಡ್ಯ, ತೃತೀಯ-ಮೀನ ಎಂ, ಶ್ರೀಕೊಂಗಾಡಿಯಪ್ಪ ಪಿ.ಯು.ಕಾಲೇಜು, ದೊಡ್ಡಬಳ್ಳಾಪುರ ಬೆಂಗಳೂರು ಗ್ರಾಮಾಂತರ ಜಿಲ್ಲೆ

ಪದವಿ/ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ-ದರ್ಶಿನಿ ಡಿ,ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಿವಮೊಗ್ಗ, ದ್ವಿತೀಯ-ಕಾವ್ಯಾ ಚಿಪ್ಪಲಕಟ್ಟಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟ, ತೃತೀಯ-ಕುಸುಮಾಬಾಯಿ ಆರ್,ಜೆಎಎಸ್ ಕಲಾ ಕಾಲೇಜು ಮೈಸೂರು ಇವರು ವಿಜೇತರಾಗಿದ್ದಾರೆ.

# ಜಯಂತಿಗಳ ಪೂರ್ವಭಾವಿ ಸಭೆ




ಧಾರವಾಡ: ಪ್ರತಿ ವರ್ಷದಂತೆ ಸಂತ ಶ್ರೀ ಸೇವಾಲಾಲ ಜಯಂತಿ, ಶ್ರೀ ಸವಿತಾ ಮಹರ್ಷಿ ಜಯಂತಿ, ಛತ್ರಪತಿ ಶ್ರೀ ಶಿವಾಜಿ ಮಾಹಾರಾಜರ ಜಯಂತಿ ಹಾಗೂ ಸಂತಕವಿ ಶ್ರೀ ಸರ್ವಜ್ಞ ಜಯಂತಿಗಳನ್ನು ವಿಜೃಂಭಣೆಯಿಂದ ಆಚರಿಸುವ ಕುರಿತು ಬೆಳಗ್ಗೆ (ಫೆ.6) ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಜರುಗಿತು.

ಅವರು ಮಾತನಾಡಿ, ಫೆಬ್ರವರಿ 15 ರಂದು ಬೆಳಗ್ಗೆ 11 ಗಂಟೆಗೆ ಸಂತ ಶ್ರೀ ಸೇವಾಲಾಲ ಜಯಂತಿ, ಫೆಬ್ರವರಿ 16 ರಂದು ಬೆಳಗ್ಗೆ 11 ಗಂಟೆಗೆ ಶ್ರೀ ಸವಿತಾ ಮಹರ್ಷಿ ಜಯಂತಿ, ಫೆಬ್ರವರಿ 19 ರಂದು ಬೆಳಗ್ಗೆ 11 ಗಂಟೆಗೆ ಛತ್ರಪತಿ ಶ್ರೀ ಶಿವಾಜಿ ಮಾಹಾರಾಜರ ಜಯಂತಿ ಮತ್ತು ಫೆಬ್ರವರಿ 20 ರಂದು ಬೆಳಗ್ಗೆ 11 ಗಂಟೆಗೆ ಸಂತಕವಿ ಶ್ರೀ ಸರ್ವಜ್ಞ ಜಯಂತಿ ಆಚರಿಸಲಾಗುವುದು. ಈ ಎಲ್ಲ ಜಯಂತಿ ಕಾರ್ಯಕ್ರಮಗಳನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಭಾಭವನದಲ್ಲಿ ಆಚರಿಸಲು ನಿರ್ಧರಿಸಲಾಗಿದೆ. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ವಿವಿಧ ಸಮಾಜದ ಮುಖಂಡರು ಭಾಗವಹಿಸಿ ಸಲಹೆ, ಸೂಚನೆ ನೀಡಿದರು. ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

# ನಿಷ್ಪಕ್ಷಪಾತ ಮತ್ತು ಪಾರದರ್ಶಕತೆಯಿಂದ ಯಶಸ್ವಿಯಾಗಿ ಚುನಾವಣಾ ಕರ್ತವ್ಯ ನಿರ್ವಹಿಸೋಣ: ಗುರುದತ್ತ ಹೆಗಡೆ



ಶಿವಮೊಗ್ಗ: ಮುಂಬರುವ ಲೋಕಸಭಾ ಚುನಾವಣೆಯನ್ನು ಎಲ್ಲರೂ ಒಂದು ತಂಡವಾಗಿ ನಿಷ್ಪಕ್ಷಪಾತ, ಪಾರದರ್ಶಕತೆ ಮತ್ತು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವ ಮೂಲಕ ಯಶಸ್ವಿಗೊಳಿಸೋಣ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಚುನಾವಣಾಧಿಕಾರಿಗಳಿಗೆ ತಿಳಿಸಿದರು.

ಅಂಬೇಡ್ಕರ್ ಭವನದಲ್ಲಿ ಎಫ್‌ಎಸ್ಟಿ, ಎಸ್‌ಎಸ್ಟಿ, ವಿವಿಟಿ, ಇಇಒ, ವಿಎಸ್ಟಿ ಚುನಾವಣಾ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಚುನಾವಣೆಗಳನ್ನು ನಡೆಸುವ ಅವಕಾಶ ಎಲ್ಲರಿಗೂ ಲಭಿಸುವುದಿಲ್ಲ. ಸರ್ಕಾರಿ ಅಧಿಕಾರಿ/ನೌಕರರಾದ ನಮಗೆ ಈ ಸದವಕಾಶ ಲಭಿಸಿದ್ದು, ಇದನ್ನು ದೇವರ ಕೆಲಸವೆಂದು ಎಲ್ಲರೂ ಅತ್ಯಂತ ನಿಷ್ಪಕ್ಷವಾಗಿ ಮತ್ತು ಪಾರದರ್ಶಕವಾಗಿ ನಿರ್ವಹಿಸೋಣವೆಂದು ಕರೆ ನೀಡಿದರು.

ಎಫ್‌ಎಸ್ಟಿ, ಎಸ್‌ಎಸ್ಟಿ, ವಿವಿಟಿ, ಇಇಒ, ವಿಎಸ್ಟಿ ಯಾವುದೇ ತಂಡಗಳು ತಮ್ಮ ಕರ್ತವ್ಯಕ್ಕೆ ಸರಿಯಾದ ಸಮಯಕ್ಕೆ ಹಾಜರಾಗಬೇಕು. ವಾಹನಗಳು ಸೇರಿದಂತೆ ಕರ್ತವ್ಯದಲ್ಲಿ ಆದಷ್ಟು ಹೆಚ್ಚಾಗಿ ತಂತ್ರಜ್ಞಾನ ಬಳಕೆ ಮಾಡಿಕೊಳ್ಳಲಾಗುವುದು. ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಗಂಭೀರವಾಗಿ ಪರಿಗಣಿಸಲಾಗುವುದು.

ತಾವು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಒ ಯವರೊಂದಿಗೆ ಖುದ್ದಾಗಿ ಎಲ್ಲ ಚೆಕ್ಪೋಸ್ಟ್‌ಗಳಿಗೆ ಭೇಟಿ ನೀಡುವೆವು. ಚುನಾವಣಾ ಸಮಯದಲ್ಲಿ ಚೆಕ್ಪೋಸ್ಟ್‌ಗಳಲ್ಲಿ ಸ್ವಲ್ಪ ಟ್ರಾಫಿಕ್ ಸಮಸ್ಯೆಯಾಗುತ್ತದೆ. ಅದನ್ನು ನಿರ್ವಹಿಸಬೇಕು. ಚೆಕ್ಪೋಸ್ಟ್‌ಗಳಲ್ಲಿ ಬಸ್ಸುಗಳನ್ನು ಸಹ ತಪಾಸಣೆ ಮಾಡಬೇಕು ಎಂದರು.

ತಹಶೀಲ್ದಾರರು ತಮ್ಮ ತಮ್ಮ ಚುನಾವಣಾ ಅಧಿಕಾರಿ/ಸಿಬ್ಬಂದಿಗಳನ್ನು ತಮ್ಮ ಮಕ್ಕಳಂತೆ ನೋಡಿಕೊಳ್ಳಬೇಕು. ತಂಡವಾಗಿ ಉತ್ತಮ ಕಾರ್ಯನಿರ್ವಹಿಸಲು ಪ್ರೇರೇಪಿಸಬೇಕು. ಕ್ಷೇತ್ರದಲ್ಲಿ ಅಥವಾ ಯಾವುದೇ ರೀತಿಯಲ್ಲಿ ಅವರಿಗೆ ಸಮಸ್ಯೆಗಳು ಎದುರಾದಲ್ಲಿ ಶೀಘ್ರವಾಗಿ ಮತ್ತು ಸಮರ್ಪಕವಾಗಿ ನಿರ್ವಹಿಸಬೇಕು ಎದು ಸೂಚಿಸಿದ ಅವರು ಸಾಕಷ್ಟು ಸೇವಾನುಭವವುಳ್ಳವರನ್ನೇ ಎಂಸಿಸಿ ಇತರೆ ತಂಡಗಳಿಗೆ ನೇಮಕ ಮಾಡಲಾಗಿದೆ ಎಂದರು.

ಯಾವುದೇ ಕಾರಣಕ್ಕೂ ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸುವುದನ್ನು ಸಹಿಸುವುದಿಲ್ಲ. ತಮ್ಮ ಜವಾಬ್ದಾರಿಯಿಂದ ಹಿಂಜರಿಯದೆ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು. ಕೆಲಸ ನಿರ್ವಹಣೆ ವೇಳೆ ಮೂಲಭೂತ ಸೌಕರ್ಯ, ಭದ್ರತೆ ಸೇರಿದಂತೆ ಯಾವುದೇ ರೀತಿಯ ಸಮಸ್ಯೆಗಳಿದ್ದರೆ ಸಂಬಂಧಿಸಿದ ತಹಶೀಲ್ದಾರ್ ಅಥವಾ ತಮ್ಮ ಗಮನಕ್ಕೆ ತಂದಲ್ಲಿ ಸರಿಪಡಿಸುವುದಾಗಿ ತಿಳಿಸಿದರು.

ತಮ್ಮ ಚುನಾವಣಾ ಪಾತ್ರದ ಕರ್ತವ್ಯಕ್ಕೆ ಸಂಬಂಧಿಸಿದಂತೆ ಯಾವುದೇ ರೀತಿಯ ಗೊಂದಲಗಳು, ಸ್ಪಷ್ಟೀಕರಣಗಳಿದ್ದಲ್ಲಿ ತರಬೇತಿ ಕಾರ್ಯಕ್ರಮದಲ್ಲಿ ಮಾಸ್ಟರ್ ಟ್ರೈನರ್ ಬಳಿ ಕೇಳಿ ಸ್ಪಷ್ಟಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ, ಮಾಸ್ಟರ್ ಟ್ರೈನರ್ ಗಳಾದ ಶಿವಕುಮಾರ್, ರವಿಚಂದ್ರ ನಾಯ್ಕ್, ಹಾಜರಿದ್ದರು.

# ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮ

ಬೆಳಗಾವಿ: ಸಂವಿಧಾನದ ಮೌಲ್ಯ ಹಾಗೂ ಅದರ ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಬೆಳಗಾವಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ. 5 ಮತ್ತು 6 ರಂದು ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಗಣ ರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಸ್ಥಬ್ದ ಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.



ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದ ಚಿತ್ರಗಳನ್ನು ಒಳಗೊಂಡ ವಿಶೇಷ ರಥವನ್ನು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥವನ್ನು ಯಸಶ್ವಿಗೊಳ್ಳಿಸಿದರು. ಮೊದಲ ಮಾರ್ಗದ ರಥ ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಸಂಚರಿಸಿತು. ಎರಡನೇ ಮಾರ್ಗದ ರಥ ಬೆಳಗಾವಿ, ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನ ಕಿತ್ತೂರ, ಖಾನಾಪೂರ ತಾಲೂಕು ಮಾರ್ಗಗಳಲ್ಲಿ ಸಂಚರಿಸಿತು.

ಫೆ. 5 ರಂದು ಮೊದಲ ಮಾರ್ಗದ ರಥವು ಹುಕ್ಕೇರಿ ತಾಲೂಕಿನ ನಿಡಸೋಸಿ, ಅಂಕಲಗಿ, ಸೊಲ್ಲಾಪೂರ, ಹರಗಾಪೂರ, ಬೋರಗಲ್, ಕೇಸ್ತಿ, ಬಾಡ, ಕೊನಕೇರಿ, ಬಾಲೂರ, ಮತ್ತಿವಾಡೆ ಮತ್ತು ಹಿಟ್ಟಣಗಿಗ್ರಾಮ ಪಂಚಾಯತಿ ಮೂಲಕ ಸಂಚರಿಸಿತು.

ಈ ಜಾಥಾದಲ್ಲಿ ಅಧಿಕ ಸಂಖ್ಯೆಯಲ್ಲಿ ಸಾರ್ವಜನಿಕರು, ಸ್ವ-ಸಹಾಯ ಸಂಘಗಳ ಪ್ರತಿನಿಧಿಗಳು, ಜನಪ್ರತಿನಿಧಿಗಳು, ವಿದ್ಯಾರ್ಥಿಗಳು ಭಾಗವಹಿಸಿ ಸಂವಿಧಾನ ಜಾಗೃತಿಯನ್ನು ಯಶಸ್ವಿಗೊಳಿಸಿದರು.

# ಒಂದು ತಿಂಗಳಲ್ಲಿ ನಿವೃತ್ತಿ ಹೊಂದಬೇಕಿದ್ದ ಯೋಧ ಹೃದಯಾಘಾತದಿಂದ ಸಾವು

ಗದಗ: ಅಸ್ಸಾಂ ಹಾಗೂ ಸಿಕ್ಕಿಂ ಮಧ್ಯದ ಬಾಂಗ್ಡೊಂಗ್ನಲ್ಲಿ ಜಿಲ್ಲೆಯ ನರಗುಂದ ತಾಲೂಕಿನ ರಡ್ಡೇರ ನಾಗನೂರ ಗ್ರಾಮದ ಯೋಧನೋರ್ವ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಗದಗ ಜಿಲ್ಲೆಯ ನರಗುಂದ ತಾಲೂಕಿನ ರಡ್ಡೆರನಾಗನೂರ ಗ್ರಾಮದ ರಾಮನಗೌಡ ಕರಬಸನಗೌಡರ (42) ಎಂಬವರು ಮೃತಪಟ್ಟ ಯೋಧ. ಬಾಗ್ ಡೋಗ್ರಾ ಸೆಕ್ಟರ್‌ನಲ್ಲಿ ತೀವ್ರ ಹಿಮಪಾತದ ನಡುವೆ ಕಾರ್ಯ



ನಿರ್ವಹಿಸುತ್ತಿದ್ದ ರಾಮನಗೌಡರಿಗೆ ರಕ್ತದೊತ್ತಡ ಏರುಪೇರಾದ ಕಾರಣ ಹೃದಯಾಘಾತ ಉಂಟಾಗಿ ಸಾವನ್ನಪ್ಪಿದ್ದಾರೆ ಎಂದು ತಿಳಿದು ಬಂದಿದೆ. ಇಂಡಿಯನ್ ಟಿಬೆಟಿಯನ್ ಬಾರ್ಡರ್ ಸೆಕ್ಯೂರಿಟಿ ಫೋರ್ಸ್‌ಗೆ 2002 ರಲ್ಲಿ ನೇಮಕಗೊಂಡ ರಾಮನಗೌಡ ಕಳೆದ 22 ವರ್ಷಗಳಿಂದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು. 2024ರ ಏಪ್ರಿಲ್ನಲ್ಲಿ ಸೇವಾ ನಿವೃತ್ತಿ ಹೊಂದಿ ಸ್ವಗ್ರಾಮಕ್ಕೆ ಮರಳಬೇಕಿದ್ದ ಯೋಧ ರಾಮನಗೌಡ, ಉತ್ತರಾಖಂಡ, ಅಸ್ಸಾಂ, ಮಿಜೋರಾಂ, ಚಂಡೀಗಢ, ಸಿಕ್ಕಿಂ ಸೇರಿದಂತೆ ಅನೇಕ ಕಡೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ.

# ಫೆ.5 ರಿಂದ 10 ವರೆಗೆ ಗಣಕಯಂತ್ರ ಥೆಯರಿ ಮತ್ತು ಪ್ರಯೋಗಿಕ ಪರೀಕ್ಷೆ

ಬೆಳಗಾವಿ: ಬೆಳಗಾವಿಯ ಆರ್.ಎನ್.ಶೆಟ್ಟಿ ಪಾಲಿಟೆಕ್ನಿಕ್ ಮತ್ತು ಎಸ್. ಎನ್ ಪದವಿ ಪೂರ್ವ ಕಾಲೇಜು ಪರಿಕ್ಷಾ ಕೇಂದ್ರಗಳಲ್ಲಿ ಫೆ.5 ರಿಂದ 10ವರೆಗೆ ಗಣಕಯಂತ್ರ ಥೆಯರಿ ಮತ್ತು ಪ್ರಯೋಗಿಕ ಪರೀಕ್ಷೆಗಳನ್ನು ನಡೆಯಲ್ಲಿವೆ. ಪರೀಕ್ಷೆ ನಡೆಯಲಿರುವ ದಿವಸಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇದಾಜ್ಞೆ ಜಾರಿಗೋಳಿಸಿ ನಗರ ಪೊಲೀಸ್ ಆಯುಕ್ತರು ಆದೇಶವನ್ನು ಹೋರಡಿಸಿದ್ದಾರೆ.

ಪರೀಕ್ಷೆಗಳನ್ನು ನಿಷ್ಪಕ್ಷಪಾತವಾಗಿ ಹಾಗೂ ಯಾವುದೇ ತೊಂದರೆ ಬಾರದಂತೆ ಪರೀಕ್ಷೆ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ನಿರ್ಬಂಧಿಸಲಾಗಿದೆ.

ಶಾಲಾ-ಕಾಲೇಜಿನ ಸಿಬ್ಬಂದಿ, ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ಹೊರತು ಪಡಿಸಿ ಸಾರ್ವಜನಿಕರನ್ನು ನಿಷೇದಿಸಲಾಗಿದೆ.

ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ತಿರುಗಾಡುವುದು, ಪರೀಕ್ಷಾ ಕೇಂದ್ರದ ಸುತ್ತಲೂ ಇರುವ ಸೈಬರ್ ಕೆಫೆ, ಝರಾಕ್ಸ್ ಅಂಗಡಿ ಹಾಗೂ ಇನ್ನಿತರ ಅಂತರ್ಜಾಲ ಕೆಂದ್ರಗಳನ್ನು ಕಾಲಕ್ಕೆ ಕಡ್ಡಾಯವಾಗಿ ಮುಚ್ಚಲು ಆದೇಶಿಸಲಾಗಿದೆ

ಸದರಿ ಆದೇಶ ಉಲ್ಲಂಘಿಸಿದವರ ವಿರುದ್ಧ ಕಲಂ 188 ಭಾರತೀಯ ದಂಡ ಸಂಹಿತೆ ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಬೆಳಗಾವಿಯ ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿಗಳು ಮತ್ತು ಪೊಲೀಸ್ ಆಯುಕ್ತರಾದ ಎಸ್. ಎನ್. ಸಿದ್ದರಾಮಪ್ಪಾ ಅವರು ಪ್ರಕಟಣೆಯಲ್ಲಿ ತಿಳಿಸಿದರು.

# ಪಂ. ಕಡ್ಲಾಸ್ಕರಬುವಾ ಸಂಗೀತವನ್ನೇ ಉಸಿರನ್ನಾಗಿಸಿಕೊಂಡಿದ್ದರು: ಚೆನ್ನೂರ

ಬೆಳಗಾವಿ: ಭಜನಾ ಮಂಡಲಗಳ ಮೂಲಕ ಮನೆ ಮನೆಗೂ ಸಂಗೀತವನ್ನು ತಲುಪಿಸಿದ ಶ್ರೇಯಸ್ಸು ಪಂ. ಕಡ್ಲಾಸ್ಕರಬುವಾ ಅವರದ್ದಾಗಿತ್ತು.




ಸಂಗೀತವನ್ನೇ ಜೀವನದ ಉಸಿರನ್ನಾಗಿಸಿಕೊಂಡಿದ್ದ ಬುವಾರವರ ಹತ್ತಿರದ ಒಡನಾಟ ನನಗೆ ಲಭಿಸಿತ್ತು. ಅವರು ತುಂಬ ಮೃದು ಸ್ವಭಾವದಾಗಿದ್ದರು ಎಂದು ಕೆ. ಎಚ್. ಚೆನ್ನೂರ ಜಂಟಿ ನಿರ್ದೇಶಕರು ಬೆಳಗಾವಿ ವಲಯ ಬೆಳಗಾವಿ ಇವರು ಇಂದಿಲ್ಲಿ ಹೇಳೀದರು.

ವಿ ಕಡ್ಲಸ್ಕರಬುವಾ ಮೆಮೊರಿಯಲ್ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಇವರ ಸಹಯೋಗದೊಂದಿಗೆ ಪಂ. ಕಡ್ಲಾಸ್ಕರಬುವಾ ಅವರ 22 ನೇ ವರ್ಷದ ಪುಣ್ಯತಿಥಿಯನ್ನು "ಸಂಗೀತೋತ್ಸವ" ಕಾರ್ಯಕ್ರಮವನ್ನು ಇದೇ ದಿ. 3 ಮತ್ತು 4 ರಂದು ಕೊರೆಬೀದಿಯಲ್ಲಿರುವ ಸರಸ್ವತಿ ವಚನಾಲಯದಲ್ಲಿ ಆಚರಿಸಲಾಯಿತು. ಉದ್ಘಾಟಕರಾಗಿ ಆಗಮಿಸಿದ್ದ ಚೆನ್ನೂರ ಮೇಲಿನಂತೆ ಹೇಳಿದರು. ಮುಂದೆ ಮಾತನಾಡುತ್ತ ಅವರು, ಪಂ. ಕಡ್ಲಾಸ್ಕರ ಸಂಗೀತ ಪರಂಪರೆಯನ್ನು ಅವರ ಶಿಷ್ಯರಾದ ಪಂ. ಗುರುರಾಜ ಕುಲಕರ್ಣಿ ಮತ್ತು ಪಂ. ರಾಜಪ್ರಭು ಧೋತ್ರೆಯವರು ಮುಂದೊರೆಸುಕೊಂಡು ಹೋಗುತ್ತಿದ್ದಾರೆ. ಅವರಿಗೆ ಯಶ ಸಿಗಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಭೂಪಾಲದ ಶ್ರೀಮತಿ ಜಯಶ್ರೀ ಸವಾಗುಂಜಿ ಇವರು ರಾಗ ಮುಲ್ತಾನಿಯೊಂದಿಗೆ ಪ್ರಾರಂಭಿಸಿ ರಾಗದಲ್ಲಿ ವಿಲಂಬಿತ್ ಏಕತಾಲದಲ್ಲಿ "ಕವನ ದೇಸ ಗಯೋ" ಹಾಗೂ ಧ್ರುತ ತಿನತಾಲದಲ್ಲಿ "ಝಣಕ ಜುನಕ ಪಾಯಲ ಬಾಜೆ" ಯನ್ನು ಪ್ರಸ್ತುತಪಡಿಸಿದರು.

ಪಂ ಸಂತೋಷ ನಹರ್ ತಮ್ಮ ವಾಯೊಲಿನ್ ವಾದನವನ್ನು ರಾಗ ಕಿರವಾಣಿಯೊಂದಿಗೆ ಪ್ರಾರಂಭಿಸಿ ವಿಲಂಬಿತ್ ತ್ರಿತಾಲ ಹಾಗೂ ಧ್ರುತ ಮಿಶ್ರಮಾಂಡದಲ್ಲಿ ಧುನ ನಂತರ ರಾಗ ಮಿಶ್ರ ಪಿಲುದಲ್ಲಿ ಠುಮರಿ ಪ್ರಸ್ತುತಪಡಿಸಿದರು.

ವಿದುಷಿ ರೇಣುಕಾ ನಾಕೋಡ ತಮ್ಮ ಶಾಸ್ತ್ರೀಯ ಗಾಯನವನ್ನು ರಾಗ ರಾಗಶ್ರೀಯೊಂದಿಗೆ ಪ್ರಾರಂಭಿಸಿ ತದನಂತರ ಮರಾಠಿಯ "ಮಾಝೆ ಮಾಹೇರ ಪಂಢರಿ" ಪ್ರಸ್ತುತಪಡಿಸಿದರು.

ಮುಂಬಯಿಯ ಪಂ ಮಹೇಶ ಕುಲಕರ್ಣಿ ರಾಗ ಚಂದ್ರಕೌಂಸದೊಂದಿಗೆ ಪ್ರಾರಂಭಿಸಿ ರಾಗದಲ್ಲಿ ವಿಲಂಬಿತ್ ಜಪ್ತಾಲದ "ತೆರೆ ಪಿಯಾ ಬಿನ್" ಹಾಗೂ ಧ್ರುತ ತಿನತಾಲದ "ಜೊ ಬನಾರೆ ಎಲಲಯಾಕೋ" ನಂತರ ರಾಗ ಭೈರವಿಯಲ್ಲಿ ಗುರುಗಳ "ಕಾಯಾಕ್ ಪಿಂಜರಾ" ಪ್ರಸ್ತುತಪಡಿಸಿದರು.

ಸಂಗೀತ್ಸೋವದ ಎರಡನೇ ದಿನ ದಿ. 4 ರಂದು ಬಿ ವಿ ಕಡ್ಲಸ್ಕರಬುವಾ ಅವರ ಪಾದುಕಾ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಪ್ರಾರಂಭವಾಯಿತು.

ಹರಿ ಕಾಕಾ ಭಜನಾ ಮಂಡಳಿ, ಅನಗೋಳದ ಪ್ರತಿಭಾ ಅಪ್ಪೆ ಭಕ್ತಿ ಭಜನಾ ಮಂಡಳಿ, ಲಕ್ಷ್ಮೀನಾರಾಯಣ ಭಜನಾ ಮಂಡಳಿ ಭಕ್ತಿಗೀತೆಗಳನ್ನು ಹಾಡಿದರು.

ಮಾಧುರಿ ಮುತಾಲಿಕ್ ದೇಸಾಯಿ ಕನ್ನಡ ಭಜನೆಯನ್ನು, ನಂತರ ಮಂಜುಶ್ರೀ ಖೋತ ಸುಗಮ ಸಂಗೀತ, ರುದ್ರಮ್ಮ ಯಾಳಗಿ ಜನಪದ ಗೀತೆ ಹಾಗೂ ಭಜನೆಯನ್ನು ಹಾಡಿದರು ಮತ್ತು ಸೀಮಾ ಕುಲಕರ್ಣಿಯವರು ಹಿಂದಿ ಭಜನೆಯನ್ನು ಹಾಡಿದರು

ಪಂ ರಾಜಪ್ರಭು ಧೋತ್ರೆ, ಟ್ರಸ್ಟಿನ ಅಧ್ಯಕ್ಷರಾದ ಗುರುರಾಜ ಕುಲಕರ್ಣಿ, ವಿಜಯ ಬಾಂದಿವಡೇಕರ ಉಷಾ ರಾನಡೆ ಸಂಗೀತ ಕಾರ್ಯಕ್ರಮ ನೀಡಿದರು.

ತಬಲಾ, ಪಂ ರಘುನಾಥ ನಾಕೋಡ, ಪಂ ರವಿಕಿರಣ ನಾಕೋಡ, ಅಂಗದ ದೇಸಾಯಿ, ನಾರಾಯಣ ಗಣಾಚಾರಿ, ಕೃಷ್ಣಾ ಏರಿ, ಗಜಾನನ ಕುಲಕರ್ಣಿ, ಸತೀಶ ಗಚ್ಚಿ, ಜಿತೆಂದ್ರ ಸಾಬಣ್ಣವರ, ಮಹಾಬಳೇಶ್ವರ ಸಾಬಣ್ಣವರ, ಬಾಬು ಕಾನವಿಂದೆ, ವಿಜಯ ಸವಾಗುಂಜಿ, ವಿಜಯ ಬಾಂದಿವಡೇಕರ, ಯಶವಂತ ಬೊಂದ್ರೆ ಹಾಗೂ ಹಾರ್ಮೋನಿಯಂನಲ್ಲಿ ಯಾದವೇಂದ್ರ ಪೂಜಾರ, ಸಾರಂಗ ಕುಲಕರ್ಣಿ, ಡಾ ಸುಧಾಂಶು ಕುಲಕರ್ಣಿ, ಸುರೇಶ ಸರದೇಸಾಯಿ, ನಿರಂಜನ ಮೂರ್ತಿ, ಮಹೇಶ ಕುಲಕರ್ಣಿ ಹಾರ್ಮೋನಿಯಂ ಸಾಥ ನೀಡಿದರು.

# ಆ್ಯಂಬುಲೆನ್ಸ್ ಗೆ ಬಸ್ ಡಿಕ್ಕಿ: ರೋಗಿ ಸಾವು




ತುಮಕೂರು: ಆ್ಯಂಬುಲೆನ್ಸ್ ಹಾಗೂ ಕೆಎಸ್‌ಆರ್ಟಿಸಿ ಬಸ್ ನಡುವೆ ಅಪಘಾತ ಸಂಭವಿಸಿ ಗಾಯಳು ಸಾವನ್ನಪ್ಪಿದ ಘಟನೆ, ತುಮಕೂರು ನಗರದ ಬಿ.ಜಿ.ಎಸ್ ವೃತ್ತದಲ್ಲಿ ನಡೆದಿದೆ.ಗಾಯಾಳುವನ್ನ ಹೆಚ್ಚಿನ ಚಿಕಿತ್ಸೆಗೆಂದು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಸಾಗಿಸುವ ವೇಳೆ ಈ ದುರ್ಘಟನೆ ಸಂಭವಿಸಿದೆ. ಶಿರಾ ತಾಲೂಕಿನ ಗೋಪಿಕುಂಟೆ ಗ್ರಾಮದ ರಾಜಣ್ಣ ಚಿಕಿತ್ಸೆ ಫಲಿಸದೆ ಪ್ರಾಣ ಬಿಟ್ಟಿದ್ದಾರೆ.

ಕೆಎಸ್ ಆರ್ ಟಿ ಸಿ ಬಸ್ ಹೊಸದುರ್ಗ ಕಡೆ ಹೋಗುತಿತ್ತು. ಆ್ಯಂಬುಲೆನ್ಸ್ ಬೆಂಗಳೂರು ಕಡೆ ಹೋಗುತ್ತಿತ್ತು. ಆದರೆ ಆ್ಯಂಬುಲೆನ್ಸ್ ಗೆ ಗುದ್ದಿದ ಪರಿಣಾಮ ಗಾಯಾಳು ರಾಜಣ್ಣ ಸಾವಿಗೀಡಾಗಿದ್ದಾನೆ. ರಾಜಣ್ಣ ಗೋಪಿಕುಂಟೆ ಗ್ರಾಮದಲ್ಲಿ ಮನೆ ಮೇಲಿನಿಂದ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದರು, ಹೆಚ್ಚಿನ ಚಿಕಿತ್ಸೆ ಗಾಗಿ ತುಮಕೂರಿನಿಂದ ಬೆಂಗಳೂರಿಗೆ ಸಾಗಿಸುವಾಗ ಆ್ಯಂಬುಲೆನ್ಸ್ ಅಪಘಾತಕ್ಕೀಡಾಗಿದೆ. ಈ ವೇಳೆ ಚಾಲಕ ರೆಹಮಾನ್ ಪಾಷ, ಸಂಬಂಧಿ ಹನುಮಂತರಾಪ್ಪ ಗಾಯಗೊಂಡಿದ್ದಾರೆ. ತುಮಕೂರು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಲೋಕಾಯುಕ್ತ ಜನ ಸಂಪರ್ಕ ಸಭೆ ಫೆ.14 ರಂದು

ಬೆಳಗಾವಿ: ಜಿಲ್ಲೆಯ ಮೂಡಲಗಿ ತಾಲೂಕಿನ ತಹಶೀಲ್ದಾರ ಕಛೇರಿ ಸಭಾಭವನದಲ್ಲಿ ಫೆ.14 ರಂದು ಬೆಳಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಮೂಡಲಗಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ನಡೆಸಲಿದ್ದಾರೆ.


ಸರ್ಕಾರಿ ಕಛೇರಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಲು ತಿಳಿಸಲಾಗಿದೆ.ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ, ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ 0831-2950756 ಅಥವಾ 0831-2421922 ಸಂಖ್ಯೆಗೆ ಸಂರ್ಪಕಿಸಬಹುದು ಎಂದು ಬೆಳಗಾವಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಧಾರ್ಮಿಕ ಭಾವನೆಗಳಿಗೆ ಧಕ್ಕೆ ಆರೋಪ: ಪ್ರೊಫೆಸರ್ ಸೇರಿ ಐವರು ಅರೆಸ್ಟ್

ಕಾಲೇಜು ವಿದ್ಯಾರ್ಥಿಗಳು ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದ ಆರೋಪದ ಹಿನ್ನೆಲೆ ಪುಣೆ ವಿಶ್ವವಿದ್ಯಾನಿಲಯದ ಪ್ರೊಫೆಸರ್ ಮತ್ತು ಐವರು ವಿದ್ಯಾರ್ಥಿಗಳನ್ನು ಅರೆಸ್ಟ್ ಮಾಡಲಾಗಿದೆ.

ಈ ವಿದ್ಯಾರ್ಥಿಗಳು 'ರಾಮಲೀಲಾ' ವನ್ನು ಆಧಾರಿಸಿ ಒಂದು ನಾಟಕ ಮಾಡುತ್ತಿದ್ದರು. ಇದರ ಭಾಗವಾಗಿದ್ದ ಆರು ಮಂದಿಯನ್ನು ಬಂಧಿಸಲಾಗಿದೆ ಎಂದು ವರದಿಯಾಗಿದೆ.

ಲಲಿತ ಕಲಾ ಕೇಂದ್ರದ ವಿಭಾಗದ ಮುಖ್ಯಸ್ಥ ಡಾ.ಪ್ರವೀಣ್ ಭೋಲೆ ಮತ್ತು ವಿದ್ಯಾರ್ಥಿಗಳಾದ ಭವೇಶ್ ಪಾಟೀಲ್, ಜಯ್ ಪೆಡ್ನೇಕರ್, ಪ್ರಥಮೇಶ್ ಸಾವಂತ್, ರಿಷಿಕೇಶ್ ದಳವಿ ಮತ್ತು ಯಶ್ ಚಿಖ್ಲೆ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ನಂತರ ಬಿಡುಗಡೆ ಮಾಡಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.





ಈ ನಾಟಕದಲ್ಲಿನ ಆಕ್ಷೇಪಾರ್ಹ ಸಂಭಾಷಣೆಗಳು ಮತ್ತು ದೃಶ್ಯಗಳು, 6 ಜನರ ಬಂಧನಕ್ಕೆ ಕಾರಣವಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ ಎಂದು ವರದಿಯಾಗಿದೆ.

ನಾಟಕವು 'ರಾಮಲೀಲಾ'ದ ವಿವಿಧ ಪಾತ್ರಗಳನ್ನು ಚಿತ್ರಿಸುವಂತಿತ್ತು. ಜೊತೆಗೆ ಅವರ ಸಂಭಾಷಣೆ ಕೂಡ ಹಾಗೆಯೇ ಇತ್ತು ಎಂದು ಆರೋಪಗಳು ಕೇಳಿ ಬಂದಿವೆ. ನಾಟಕ ಪ್ರದರ್ಶನದ ವೇಳೆ ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಗೆ ಸಂಬಂಧಿಸಿದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಸದಸ್ಯರು ಮತ್ತು ಪುಣೆ ವಿಶ್ವವಿದ್ಯಾಲಯದ ಲಲಿತ ಕಲಾ ಕೇಂದ್ರದ ವಿದ್ಯಾರ್ಥಿಗಳ ನಡುವೆ ಘರ್ಷಣೆ ಸಂಭವಿಸಿದೆ.

ವಿಶ್ವವಿದ್ಯಾನಿಲಯದ ಅಧಿಕೃತ ಪ್ರದರ್ಶನ ಕಲೆ ಕೇಂದ್ರವಾದ ಲಲಿತ ಕಲಾ ಕೇಂದ್ರವು ಶುಕ್ರವಾರ ಸಂಜೆ ಈ ನಾಟಕವನ್ನು ಪ್ರಸ್ತುತ ಪಡಿಸಿತ್ತು. ಇದು ವಿವಾದಕ್ಕೆ ಕಾರಣವಾಗಿದೆ.

ಎಫ್‌ಐಆರ್‌ನಲ್ಲಿ ಒದಗಿಸಲಾದ ಆರಂಭಿಕ ಮಾಹಿತಿಯ ಪ್ರಕಾರ, ನಾಟಕದಲ್ಲಿ ಸೀತಾಮಾತೆ ಸಿಗರೇಟ್ ಸೇದುವುದು ಮತ್ತು ಆಕ್ಷೇಪಾರ್ಹ ಭಾಷೆ ಬಳಸಿ ಇತರರಿಗೆ ಬೈಯುವುದು ಇತ್ತು. ಸೀತೆಯ ಪಾತ್ರವನ್ನು ಯುವಕನೊಬ್ಬ ಮಾಡಿದ್ದು, ಸಿಗರೇಟ್ ಸೇದುವ ದೃಶ್ಯ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಪ್ರದರ್ಶನದ ವೇಳೆ ಎಬಿವಿಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದ್ದರಿಂದ ನಾಟಕವನ್ನು ನಿಲ್ಲಿಸಲಾಯಿತು ಎಂದು ಎಫ್‌ಐಆರ್ ವರದಿ ಮಾಡಿದೆ.

ಇನ್ನೂ ಸಾವಿತ್ರಿಬಾಯಿ ಫುಲೆ ಪುಣೆ ವಿಶ್ವವಿದ್ಯಾಲಯ ಆಡಳಿತವು ರಾಮಾಯಣದ ಪಾತ್ರಗಳ ಅಪಹಾಸ್ಯವನ್ನು ಬೆಂಬಲಿಸುವುದಿಲ್ಲ ಮತ್ತು ಜನರ ಭಾವನೆಗಳಿಗೆ ನೋವಾಗಿದ್ದರೆ ಕ್ಷಮೆಯಾಚಿಸುವುದಾಗಿ ಹೇಳಿದೆ.

# ಬೇರಡ ಪದ ಎಸ್ಟಿ ಪಟ್ಟಿಗೆ ಸೇರಿಸಲು ಆಗ್ರಹಿಸಿ ವಾಲ್ಮೀಕಿ ಸಮಾಜ ಪ್ರತಿಭಟನೆ



ಬೆಳಗಾವಿ: ವಾಲ್ಮೀಕಿ ನಾಯಕ ಸಮಾಜದ ಪರ್ಯಾಯ ಪದವಾದ 'ಬೇರಡ' ಪದವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಬೇಕೆಂದು ಆಗ್ರಹಿಸಿ ಬೆಳಗಾವಿ ಜಿಲ್ಲಾ ವಾಲ್ಮೀಕಿ ಸಮಾಜ ನಗರದ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಪಾದಯಾತ್ರೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿತು.

ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಜ್ಯ ಉಪಾಧ್ಯಕ್ಷ ಹಾಗೂ ಬೆಳಗಾವಿ ಜಿಲ್ಲೆ ವಾಲ್ಮೀಕಿ ಸಮಾಜದ ಅಧ್ಯಕ್ಷ ರಾಜಶೇಖರ ತಳವಾರ ಮಾತನಾಡಿ, ಪರಿಶಿಷ್ಟ ಪಂಗಡದ ಯಾವೊಂದು ಸಂಬಂಧ ವಿಲ್ಲದ ಜಾತಿಗಳಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರಗಳನ್ನು ಕೊಡುವುದನ್ನು ನಾವು ಕಾಣುತ್ತಿದ್ದೇವೆ. ಆದರೆ ನೈಜ ವಾಲ್ಮೀಕಿ ನಾಯಕ ಸಮಾಜದ ಪರ್ಯಾಯ ಪದ "ಬೇರಡ" ಶಬ್ದಕ್ಕೆ ಪರಿಶಿಷ್ಟ ಪಂಗಡದ ಜಾತಿ ಪತ್ರ ನೀಡದಿರುವುದನ್ನು ನಾವು ಉಗ್ರವಾಗಿ ಖಂಡಿಸುತ್ತೇವೆ. ಕಾರಣ ಈ ಕೂಡಲೇ ಸರ್ಕಾರ ಮಂತ್ರಿ ಮಂಡಲದ ಸಭೆಯಲ್ಲಿ ತೀರ್ಮಾನ ತೆಗೆದುಕೊಂಡು ವಾಲ್ಮೀಕಿ ನಾಯಕ ಸಮಾಜದ ಬೇರಡ ಹೆಸರು ಉಳ್ಳ ಸಮಾಜ ಬಾಂಧವರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆ ಪ್ರಾರಂಭಿಸಬೇಕು ಎಂದು ತಿಳಿಸಿದರು.

ವಾಲ್ಮೀಕಿ ನಾಯಕ ಸಮಾಜದ ನೈಜ ಪರ್ಯಾಯ ಪದ ಬೇರಡ ದಾಖಲೆ ಇದ್ದವರಿಗೆ ಈ ಕೂಡಲೇ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡಬೇಕು. ಬೇರಡ ಇದು ಅಪಭ್ರಂಶ ವಾಗಿದೆ ಇದು ತಾಂತ್ರಿಕ ದೋಷದಿಂದಾಗಿ ಹಾಗೂ ಮರಾಠಿ ಭಾಷಿಕರು ಉಚ್ಚರಿಸುವ ಕಾರಣ ಶಬ್ದಗಳ ವ್ಯತ್ಯಾಸ ದಿಂದಾಗಿ ಆಗಿರುವ ದೋಷ ವನ್ನು ಸರಿಪಡಿಸುವ ಕೆಲಸ ಯುದ್ಧೋಪಾದಿಯಲ್ಲಿ ಜರುಗಿಸಬೇಕೆಂದು ಆಗ್ರಹಿಸಿದರು.

ಈಗಾಗಲೇ ನೌಕರಿಯಲ್ಲಿ ಬಡ್ತಿ ಉದ್ಯೋಗದಲ್ಲಿ ಅರ್ಜಿ ಸಲ್ಲಿಸುವ ಬೇರಡ ದಾಖಲಾತಿ ಇರುವ ವಾಲ್ಮೀಕಿ ನಾಯಕ ಸಮಾಜದ ಬಾಂಧವರಿಗೆ ತುರ್ತಾಗಿ ನ್ಯಾಯ ಕೊಡಿಸುವ ವ್ಯವಸ್ಥೆ ಆಗಬೇಕು. ಸ್ಥಾನಿಕ ಚೌಕಾಶಿ ಗೆ ಆದ್ಯತೆ ನೀಡಬೇಕು ಹಾಗೂ ತಹಸೀಲ್ದಾರ್ ಕಂದಾಯ ನಿರೀಕ್ಷಕರು ಸ್ಥಳೀಯವಾಗಿ ಇರುವ ಸಿಬ್ಬಂದಿ ನೇಮಕ ಮಾಡಿ ನೈಜ ವಾಲ್ಮೀಕಿ ಸಮುದಾಯದ ಬಾಂಧವರಿಗೆ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿದರು.

ಉದ್ಯೋಗದಲ್ಲಿ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ವಾಲ್ಮೀಕಿ ನಾಯಕ ಸಮಾಜದ ಬಾಂಧವರಿಗೆ ಅವರ ದಾಖಲಾತಿ ಯಲ್ಲಿ ಬೇರಡ ಇದ್ದರೂ ಸಹ ಅದನ್ನು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಎಂದು ಪರಿಗಣಿಸಿ ನ್ಯಾಯ ಕೊಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಇದೇ ವೇಳೆ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ವಾಲ್ಮೀಕಿ ಸಮಾಜದ ಪ್ರಧಾನ ಕಾರ್ಯದರ್ಶಿ ದಿನೇಶ್ ಚಂದ್ರಶೇಖರ ಬಾಗಡೆ, ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಜ್ಯ ಅಧ್ಯಕ್ಷ ಪಾಂಡುರಂಗ ನಾಯಕ, ಸಂಜಯ ನಾಯಕ, ಎಸ್. ಎಸ್. ನಾಯ್ಕರ್, ನಾಗರಾಜ ದುಂದುರ, ಭೀಮರಾಯ್ ದುರ್ಗನ್ನವರ್, ರವಿ ನಾಯಕ, ಸಿದ್ದರಾಯ ನಾಯಕ, ಯಲ್ಲಪ್ಪಾ ಪಂಗ, ಅಶೋಕ ನಾಯಕ್, ರಾಯಕ್ಕಾ ಅಂಗಡಗಟ್ಟಿ, ಭೀಮಪ್ಪ ನಾಯಕ, ಸುನೀಲ್ ಕನಕೆ ಸೇರಿದಂತೆ ಸಮಾಜದ ಅನೇಕ ಮುಖಂಡರು, ನೂರಾರು ಜನ ಮಹಿಳೆಯರು ಇದ್ದರು.

# ಎಂ.ಬಿ.ಎ. ವಿದ್ಯಾರ್ಥಿಗಳಿಗೆ ಹಣಕಾಸು ನಿರ್ವಹಣೆ ಕಾರ್ಯಾಗಾರ



ಬೆಳಗಾವಿ: ಇಲ್ಲಿಯ ಭರತೇಶ ಶಿಕ್ಷಣ ಸಂಸ್ಥೆಯ ಗ್ಲೋಬಲ್ ಬಿಜಿನೆಸ್ ಸ್ಕೂಲ ಎಂ.ಬಿ.ಎ ಮಹಾವಿದ್ಯಾಲಯದಲ್ಲಿ ಇತ್ತಿಚಿಗೆ ಹಣಕಾಸು ನಿರ್ವಹಣೆ ಕುರಿತು ಎರಡು ದಿನಗಳ ಕಾರ್ಯಾಗಾರ ನಡೆಯಿತು.

ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಸೆಕ್ಯೂರಿಟಿಸ್ ಮಾರ್ಕೆಟ ಮತ್ತು ಇನ್ಸಿಟ್ಯೂಟ್ ಆಫ್ ಸೆಕ್ಯೂರಿಟಿ ಎಕ್ಸೆಂಜ ಬೋರ್ಡ ಇವರ ಸಹಯೋಗದಲ್ಲಿ ಹಾಗೂ ಆದಿತ್ಯ ಬಿರ್ಲಾ ಕ್ಯಾಪಿಟಲ್ ಫೌಂಡೇಶನ ವತಿಯಿಂದ ಕಾರ್ಪೋರೇಟ ಸಂಸ್ಥೆಗಳ ಸಾಮಾಜಿಕ ಜವಾಬ್ದಾರಿ ಯೋಜನೆಯಡಿ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಮಹಾಂತೇಶ ಕುರಿ ಅವರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತ, ಸೆಬಿ ಸಂಸ್ಥೆಯು ಇತ್ತಿಚಿಗೆ ಜಾರಿಗೆ ತಂದ ಹೊಸ ನಿಯಮಗಳು, ಮಾರುಕಟ್ಟೆಯಲ್ಲಿ ಹೂಡಿಕೆಗಳ ಪ್ರಾಮುಖ್ಯತೆ, ಸೆಕ್ಯೂರಿಟೆ ಮಾರುಕಟ್ಟೆಗಳ ಪರಿಚಯ, ಹಣ ಹೂಡಿಕೆಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಪ್ರಥಮ ಹಂತ ಮತ್ತು ದ್ವಿತಿಯ ಹಂತದ ಮುನ್ನಚ್ಚರಿಕೆಗಳು, ಮ್ಯೂಚಯಲ್ ಫಂಡಗಳ ಕಾರ್ಯನಿರ್ವಹಣೆ, ಹಣ ಹೂಡಿಕೆದಾರ ರಕ್ಷಣೆ, ಮತ್ತು ಕುಂದುಕೊರತೆಗಳ ಪರಿಹಾರವನ್ನು ಯಾವ ರೀತಿ ಪರಿಹರಿಸಬೇಕೆಂಬುದರ ಬಗ್ಗೆ ಕಾರ್ಯಾಗಾರದಲ್ಲಿ ಮಾಹಿತಿ ನೀಡಲಾಯಿತು.

ಎಂ.ಬಿ.ಎ . ವಿದ್ಯಾರ್ಥಿ ನಿಖಿಲ ರಾಘಶೆಟ್ಟಿ, ಪ್ರೋಫೆಸರ್ ರಂಜನಾ ಉಪಾಸಿ ಹಾಗೂ ನಿರ್ದೇಶಕ ಡಾ.ಪ್ರಸಾದ ದಡ್ಡಿಕರ ಅವರು ಕಾರ್ಯಾಗಾರ ಯಶಸ್ವಿಯಾಗಿ ಆಯೋಜಿಸಿದ್ದರು. ಈ ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಅಂಕಲಗಿ ಪಿಎಸ್‌ಐ ನಡೆ ಖಂಡಿಸಿ ಗೋಕಾಕ್ ನ್ಯಾಯವಾದಿಗಳಿಂದ ರಸ್ತೆ ತಡೆದು ಪ್ರತಿಭಟನೆ



ಗೋಕಾಕ: ಅಂಕಲಗಿ ಪಿಎಸ್‌ಐ ನಡೆ ಖಂಡಿಸಿ ಗೋಕಾಕ್ ನ್ಯಾಯವಾದಿಗಳು ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಮಂಗಳವಾರ ಬೃಹತ್ ಪ್ರತಿಭಟನೆ ನಡೆಸಿದರು.

ಇದಕ್ಕೂ ಮೊದಲು ಗೋಕಾಕಿನ ನ್ಯಾಯವಾದಿಗಳು ಬಸವೇಶ್ವರ ವೃತ್ತದಲ್ಲಿ ಜಮಾಯಿಸಿಕೊಂಡು ರಸ್ತೆ ತಡೆ ನಡೆಸಿ ಅಂಕಲಗಿ ಪಿಎಸ್ ಐ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ವೇಳೆ ನ್ಯಾಯವಾದಿ ಎಸ್. ವಿ. ದೇಮಶೆಟ್ಟಿ ಮಾತನಾಡಿ, ವಯಕ್ತಿಕ ಕಾರಣಕ್ಕೆ ಹಲ್ಲೆಗೊಳಗಾದ ನ್ಯಾಯವಾದಿ ದೇಸಾಯಿ ಎಂಬುವರು ಅಂಕಲಗಿ ಪೊಲೀಸ್ ಠಾಣೆಗೆ ಹೋಗಿ ಹಲ್ಲೆ ಮಾಡಿರುವರ ವಿರುದ್ಧ ದೂರು ನೀಡಿಲು ಹೋದಾಗ ಅಂಕಲಗಿ ಪೊಲೀಸ್ ಠಾಣೆ ಪೊಲೀಸರು ಯಾವುದೇ ದೂರನ್ನು ತೆಗೆದುಕೊಂಡಿಲ್ಲ. ಅಲ್ಲದೇ ಪಿಎಸ್ ಐ ಕೂಡಾ ದೂರು ನೀಡಲು ಬಂದ ದೇಸಾಯಿ ಎಂಬ ವಕೀಲರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ನ್ಯಾಯ ಒದಗಿಸಬೇಕಾದ ಅಂಕಲಗಿ ಪಿಎಸ್ ಐ ಅವರು ಹಲ್ಲೆಗೊಳೆಗಾದ ವಕೀಲನಿಗೆ ಈ ನಿಂದನೆ ಮಾಡಿರುವ ಕ್ರಮ ಖಂಡನೀಯವಾಗಿದೆ. ವಕೀಲರು ಸಮಾಜದ ಅಭಿರಕ್ಷಕರು, ಇವರನ್ನೇ ಪೊಲೀಸ್ ಇಲಾಖೆಯವರು ಹೀಗೆ ನಡೆಸಿಕೊಂಡರೆ, ಇನ್ನು ಸಾಮಾನ್ಯ ಜನರ ಗತಿ ಏನು ಎಂದು ಪ್ರಶ್ನಿಸಿದರು.

ನ್ಯಾಯವಾದಿಗಳು ಇರುವುದು ಜನರಿಗೋಸ್ಕರ, ಎಲ್ಲ ಕಡೆ ನ್ಯಾಯವಾದಿಗಳು ಜನರಿಗೆ ನ್ಯಾಯ ನೀಡಲೇಂದೆ ಹಗಲಿರುಳು ಕೆಲಸ ಮಾಡುತ್ತಿದ್ದಾರೆ. ಅಲ್ಲದೇ ಸಮಾಜದಲ್ಲಿ ನ್ಯಾಯವಾದಿಗಳಿಗೆ ಒಂದು ವಿಶೇಷವಾದ ಗೌರವಿದಿದೆ. ಇಂತಹ ಗೌರವವಿರುವ ನ್ಯಾಯವಾದಿಗಳಿಗೆ ಅಂಕಲಗಿ ಪಿಎಸ್ ಐ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ವಕೀಲ ವೃತ್ತಿಗೆ ಅನ್ಯಾಯ ಮಾಡಿದ್ದಾರೆ. ಕೂಡಲೇ ಇಂತಹ ದುರ್ನಡತೆ ತೋರಿದ ಅಂಕಲಗಿ ಪಿಎಸ್ ಐ ಅವರನ್ನು ಕೂಡಲೇ ಅಮಾನತು ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ನೂರಾರು ಸಂಖ್ಯೆಯಲ್ಲಿ ಗೋಕಾಕ ನ್ಯಾಯವಾದಿಗಳು ಭಾಗವಹಿಸಿದ್ದರು.

## ಹಣಕಾಸು ವಂಚನೆ ಮೇಲ್ವಿಚಾರಣೆ ಕೋಶ ಸ್ಥಾಪನೆ

ಧಾರವಾಡ: ಬೆಂಗಳೂರಿನ ಕಂದಾಯ ಇಲಾಖೆಯ ಸರಕಾರದ ಪ್ರಧಾನ ಕಾರ್ಯದರ್ಶಿಗಳ ನಿರ್ದೇಶನದಂತೆ, ಕೆ.ಪಿ.ಐ.ಡಿ ಕಾಯ್ದೆ 2004 ಮತ್ತು ಬಡ್ಸ್ 2019ರಲ್ಲಿ ದಾಖಲಾಗಿರುವ ವಿವಿಧ ಪ್ರಕರಣಗಳಿಗೆ ಜಿಲ್ಲಾ ಮಟ್ಟದಲ್ಲಿ ಮೇಲು ಉಸ್ತುವಾರಿ ಮಾಡಲು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಹಣಕಾಸು ವಂಚನೆ ಮೇಲ್ವಿಚಾರಣೆ ಕೋಶ ಸ್ನಾಪನೆ ಮಾಡಲು ನಿರ್ದೇಶನ ನೀಡಿರುವ ಹಿನ್ನಲೆಯಲ್ಲಿ ಕಾರ್ಯಾಲಯದ ಎಂ.ಎ.ಜಿ. ಶಾಖೆಯ ಶ್ರೀಧರ ಕೆ. ಶಿರಸ್ತೇದಾರರು ಹಾಗೂ ಪ್ರಥಮ ದರ್ಜೆ ಸಹಾಯಕ ಪ್ರವೀಣ ಪಾಟೀಲ ರವರನ್ನು ಮೇಲುಸ್ತುವಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಲಾಗಿದೆ.

ಸಾರ್ವಜನಿಕರು ಕೆ.ಪಿ.ಐ.ಡಿ ಕಾಯ್ದೆಯಡಿಯಲ್ಲಿ ದಾಖಲಾಗುವ ವಿವಿಧ ದೂಷಿತ ಹಣಕಾಸು ಹಗರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಮೇಲುಸ್ತುವಾರಿಗಳಗಿ ನೇಮಕಗೊಂಡ ಅಧಿಕಾರಿಗಳಿಗೆ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 0836-2233840ಗೆ ಸಂಪರ್ಕಿಸಬಹುದೆಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

## ಫೆ.07-10ರವರೆಗೆ ವಿದ್ಯುತ್ ವ್ಯತ್ಯಯ; ಸಹಕರಿಸಲು ಮನವಿ

ಶಿವಮೊಗ್ಗ: ಸಂತೆಕಡೂರು ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯಲ್ಲಿ ಎಫ್-01,ಎಫ್-02 ಮತ್ತು ಎಫ್-03 ಮಾರ್ಗದಲ್ಲಿ ಕುಡಿಯುವ ನೀರಿನ ಮಾರ್ಗಗಳ ಹೆಚ್ಚುವರಿ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಫೆ.07 ರಿಂದ 10 ರವರೆಗೆ ಬೆಳಿಗ್ಗೆ 11 ರಿಂದ ಸಂಜೆ 06 ಗಂಟೆವರೆಗೆ ಸಂತೆಕಡೂರು, ಶ್ರೀರಾಮನಗರ, ರಾಂಪುರ, ಕೊರಲಹಳ್ಳಿ, ಕಾಚೀನಕಟ್ಟೆ, ಜ್ಯೋತಿನಗರ, ದೊಡ್ಡಿಬೀಳು, ವಿನಾಯಕನಗರ, ಲಕ್ಕಿನಕೊಪ್ಪ, ತೋಟದಕೆರೆ, ಹುರಳಿಹಳ್ಳಿ, ಗಣಿದಾಳು, ಉಂಬ್ಳೇಬೈಲು, ಕಣಗಲಸರ, ಮರಾಠಿ ಕ್ಯಾಂಪ್, ಸಾಲಿಗೆರೆ, ಕೈತೊಟ್ಟಲು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ನಿತಿನ್‌ಗಡ್ಕರಿಯವರನ್ನು ಭೇಟಿಯಾದ ಡಾ.ಪ್ರಭಾಕರ ಕೋರೆ



ಕೇಂದ್ರ ಸಾರಿಗೆ ಸಚಿವರಾದ ನಿತಿನ್‌ಗಡ್ಕರಿಯವರನ್ನು ನವದೆಹಲಿಯಲ್ಲಿ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಭೇಟಿಯಾದರು.

ನಿತಿನ್‌ಗಡ್ಕರಿಯವರು ಮಾರ್ಚ್ 2018 ರಂದು1875 ಕೋಟಿ ರೂಪಾಯಿಗಳ ಯೋಜನೆಯಾದ ಮುರಗುಂಡಿಯಿಂದ ಗೋಟೂರ ಚತುಸ್ಪಥ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ಹಾಗೂ ಕೃಷ್ಣಾ ನದಿಯ ಮೇಲ್ಸೇತುವೆ ಕಾಮಗಾರಿಗೆ ಶಂಕು ಸ್ಥಾಪನೆ ನೆರವೇರಿಸಿದ್ದರು. ಇಂದು ಆ ಯೋಜನೆಯ ಟೆಂಡರ್ ಪ್ರಕ್ರಿಯೆಯು ನಡೆದಿದ್ದು ಶೀಘ್ರವಾಗಿ ಕಾಮಗಾರಿಯು ಪ್ರಾರಂಭಗೊಳ್ಳಲಿದೆ. ತನ್ನಿಮಿತ್ತವಾಗಿ ಡಾ.ಪ್ರಭಾಕರ ಕೋರೆಯವರು ಗಡ್ಕರಿಯವರನ್ನು ನವದೆಹಲಿಯಲ್ಲಿ ಭೇಟಿಯಾಗಿ ಈ ಮಹತ್ವದ ಚತುಸ್ಪಥ ಯೋಜನೆಯನ್ನು ಅನುಷ್ಠಾನಕ್ಕೆ ತಂದುದ್ದಕ್ಕಾಗಿ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಡಾ.ಕೋರೆಯವರು ಸುದ್ದಿಗಾರರೊಂದಿಗೆ ಮಾತನಾಡಿ ಈ ಭಾಗದ ಜನತೆಯ ಬಹುದಿನಗಳ ಕನಸಾಗಿತ್ತು. ವ್ಯಾಪಾರ ವಹಿವಾಟಿಗೆ ಈ ರಸ್ತೆಯು ಸಂಪರ್ಕ ಕಲ್ಪಿಸುವುದರೊಂದಿಗೆ ದಿನನಿತ್ಯದ ಸಂಚಾರಕ್ಕೆ ಅನುಕೂಲವಾಗದೆ. ಇದರೊಂದಿಗೆ ಕಾಗವಾಡದಿಂದ ಮೀರಜ್ ಸಂಪರ್ಕಕಲ್ಪಿಸುವ ರಸ್ತೆಯು ಕೂಡ ಚತುಸ್ಪಥವಾಗಬೇಕು ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯದ ವ್ಯಾಪಾರ ವಹಿವಾಟಕ್ಕೆ ಇನ್ನೂ ಹೆಚ್ಚಿನ ಅನುಕೂಲವಾಗುವುದೆಂದು ಸಚಿವರಿಗೆ ಮನವರಿಕೆ ಮಾಡಲಾಗಿದೆ ಎಂದು ತಿಳಿಸಿದರು.

ಮಾಜಿ ಸಚಿವರಾದ ವಿ.ಸೋಮಣ್ಣ, ತುಮಕೂರ ಎಂಪಿ ಜಿ .ಎಸ್. ಬಸವರಾಜ, ಅಂಕಲಿಯ ಸುರೇಶ ಪಾಟೀಲ ಜೊತೆಗಿದ್ದರು.

# ಸಂವಿಧಾನ ಜಾಥಾ ಪ್ರಯುಕ್ತ ಸೊರಬದಲ್ಲಿ ಬೈಕ್ ರ‍್ಯಾಲಿ



ಶಿವಮೊಗ: ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಪ್ರಯುಕ್ತ ಸೊರಬ ಪಟ್ಟಣದ ಪದವಿಪೂರ್ವ ಕಾಲೇಜಿನಿಂದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದವರೆಗೆ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಿಬ್ಬಂದಿಗಳ ಬೈಕ್ ರ‍್ಯಾಲಿ ನಡೆಸಲಾಯಿತು.

ಸಾರ್ವಜನಿಕರಲ್ಲಿ ಸಂವಿಧಾನದ ಧ್ಯೇಯೋದ್ದೇಶಗಳು, ಸಾಮಾಜಿಕ, ಆರ್ಥಿಕ, ಮತ್ತು ರಾಜಕೀಯ ನ್ಯಾಯ ಮತ್ತು ಡಾ. ಬಿ.ಆರ್ ಅಂಬೇಡ್ಕರ್‌ರವರ ಸಂವಿಧಾನದ ಪರಿಕಲ್ಪನೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು.

ತಹಶೀಲ್ದಾರ್‌ರಾದ ಹುಸೇನ್ ಎಸ್ ಸರಕಾವಸ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರದೀಪ್ ಕುಮಾರ್ ಎನ್ ಆರ್, ಪುರಸಭೆ, ಮುಖ್ಯಾಧಿಕಾರಿ ಬಾಲಚಂದ್ರ ಟಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಇಕ್ಬಾಲ್ ಜಾತಿಗೇರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿ ರೇವಣಪ್ಪ ಹಾಗೂ ತಾಲ್ಲೂಕಿನ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು, ನೋಡಲ್ ಅಧಿಕಾರಿಗಳು, ಪುರಸಭೆಯ ಸರ್ವ ಸದಸ್ಯರುಗಳು, ಸೊರಬ ಪಟ್ಟಣದ ಸಾರ್ವಜನಿಕರು, ಶಿಕ್ಷಕರು, ಹಾಗೂ ತಾಲ್ಲೂಕಿನ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಜಾಥಾದಲ್ಲಿ ಉಪಸ್ಥಿತರಿದ್ದರು.

## ಕಾರಿನ ಟೈರ್ ಸ್ಫೋಟ; ಇಬ್ಬರು ಸ್ಥಳದಲ್ಲೇ ಸಾವು




ಚಿತ್ರದುರ್ಗ: ಟೈರ್ ಸ್ಫೋಟಗೊಂಡು ಕಾರು ಪಲ್ಟಿಯಾದ ಘಟನೆ ಚಿತ್ರದುರ್ಗ ತಾಲೂಕಿನ ಕಾತ್ರಾಳ್ ಕೆರೆ ಬಳಿ ನಡೆದಿದೆ. ಘಟನೆಯಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕಾರಿನಲ್ಲಿದ್ದ ಮುತ್ತುಸ್ವಾಮಿ(69) ಹಾಗೂ ಪಾಂಡುರಂಗ(32) ಮೃತ ದುರ್ದೈವಿಗಳು. ಮತ್ತೋರ್ವನಿಗೆ ಗಂಭೀರ ಗಾಯವಾಗಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇವರು ದಾವಣಗೆರೆಯಿಂದ ಬೆಂಗಳೂರಿಗೆ ತೆರಳುತ್ತಿದ್ದರು. ಈ ವೇಳೆ ದುರ್ಘಟನೆ ಸಂಭವಿಸಿದೆ. ಈ ಕುರಿತು ಭರಮಸಾಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಆಸ್ತಿಗಾಗಿ ವೃದ್ದೆಯ ಹತ್ಯೆ



ಧಾರವಾಡ: ಆಸ್ತಿ ವಿವಾದಕ್ಕೆ ವೃದ್ಧ ಮಹಿಳೆ ಬಲಿಯಾಗಿದ್ದು, ದೇವಸ್ಥಾನಕ್ಕೆಂದು ಬಂದ ವೃದ್ದೆಯನ್ನು ಸಂಬಂಧಿಕರೇ ಹತ್ಯೆ ಮಾಡಿದ ಘಟನೆ ನವಲೂರು ಗ್ರಾಮದಲ್ಲಿ ಮಂಗಳವಾರ ನಡೆದಿದೆ. ಗ್ರಾಮದ ನಿವಾಸಿ ಕರೆವ್ವ ಇರಬಗೇರಿ (69) ಕೊಲೆಯಾದವರು. ಬೆಳಗಿನ ಜಾವ ದೇವಸ್ಥಾನಕ್ಕೆ ಹೊರಟಿದ್ದ ಕರೆವ್ವಳನ್ನು ದೇವಸ್ಥಾನದ ಪಕ್ಕದಲ್ಲಿಯೇ ಕೊಚ್ಚಿ ಕೊಲೆ ಮಾಡಲಾಗಿದೆ. ಪತಿ ಮತ್ತು ಪುತ್ರನನ್ನು ಕಳೆದುಕೊಂಡು ಒಬ್ಬಂಟಿಯಾಗಿದ್ದ ವೃದ್ದೆ ಕರೆವ್ವ ಪತಿಯ ಊರಾದ ನವಲೂರಿನಲ್ಲಿಯೇ ಸಂಬಂಧಿಕರ ಮನೆಯಲ್ಲಿ ವಾಸವಿದ್ದರು. ಪತಿಯಿಂದ ಬಂದಿದ್ದ ಆರು ಎಕರೆ ಭೂಮಿಯಿದ್ದು, ಈ ಭೂಮಿ ವಿವಾದವೇ ಕರೆವ್ವಳ ಜೀವ ತೆಗೆದುಕೊಂಡಿದೆ ಎಂಬುದು ಸಂಬಂಧಿಕರ ಆರೋಪವಾಗಿದೆ.

ನವಲೂರಿನ ವಿಠ್ಠಲ ಮಂದಿರ, ಪಂಡರಪುರದ ಆಶ್ರಮಕ್ಕೆ ದೇಣಿಗೆ ಸೇರಿದಂತೆ ಸಾಕಷ್ಟು ದಾನ ಧರ್ಮ ಮಾಡುತ್ತಿದ್ದ ಕರೆವ್ವ ಅವರಿಗೆ ಪತಿಯಿಂದ ಬಂದಿದ್ದ ಆರು ಎಕರೆ ಭೂಮಿಯ ಬಗ್ಗೆ ಸಂಬಂಧಿಕರ ಮಧ್ಯೆ ವಿವಾದವಿತ್ತು. ಇದರಿಂದ ಸಾಕಷ್ಟು ಗಲಾಟೆಗಳು ನಡೆದರೂ ಸಹ ಹಿರಿಯರ ಮೂಲಕ ಸಂಧಾನವಲ್ಲದೇ ಕೋರ್ಟ್ ಮೂಲಕ ಕೂಡ ಬಗೆಹರಿಸಲಾಗಿತ್ತು. ಇಷ್ಟಾದರೂ ಸಹ ಸಂಬಂಧಿಕರೇ ಈಗ ದೇವಸ್ಥಾನಕ್ಕೆ ಹೋಗಿದ್ದ ಕರೆವ್ವನ್ನು ಕೊಚ್ಚಿ ಕೊಲೆ ಮಾಡಿ, ಪರಾರಿಯಾಗಿದ್ದಾರೆ.




## ಪೊಲೀಸ್ ಠಾಣೆಯಲ್ಲಿ ಕೋಳಿ ಹರಾಜು

ಉಡುಪಿ: ವಾರಸುದಾರರಿಲ್ಲದ ವಾಹನಗಳನ್ನುಹರಾಜು ಹಾಕುವುದನ್ನು ನೋಡಿರುತ್ತೀರಾ ಆದರೆ ಪೊಲೀಸ್ ಠಾಣೆಯಲ್ಲಿ ಕೋಳಿ ಹರಾಜು ಹಾಕಿದ ಸುದ್ದಿ ಕೇಳಿದ್ದೀರಾ? ಅಂತದ್ದೊಂದು ಘಟನೆ ಮಣಿಪಾಲದ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಅಕ್ರಮವಾಗಿ ಕೋಳಿ ಅಂಕ ಬೆಟ್ಟಿಂಗ್ ನಡೆಸುವಾಗ ಪೊಲೀಸರು ದಾಳಿ ನಡೆಸಿದ್ದರು ಈ ವೇಳೆ 25 ಕೋಳಿಗಳನ್ನು ಸೀಜ್ ಮಾಡಲಾಗಿತ್ತು . ಹೀಗೆ ಸೀಜ್ ಆದ ಕೋಳಿಗಳನ್ನು ಪೊಲೀಸರು ಠಾಣೆ ಮುಂದೆ (ಫೆ.5) ಹರಾಜು ಹಾಕಿದ್ದಾರೆ.

ಹಾರಾಜು ಪ್ರಕ್ರಿಯೆಯಲ್ಲಿ ಕೋಳಿ ಕೊಳ್ಳಲು ಸಾಕಷ್ಟು ಜನ ಮುಂದೆ ಬಂದಿದ್ದು ಬಲು ಜೋರಾಗಿಯೇ ಹರಾಜು ಪ್ರಕ್ರಿಯೆ ನಡೆದಿದೆ. ಒಂದು ಕೋಳಿಗೆ 400 ರೂಪಾಯಿಗಳಿಂದ ಹರಾಜು ಕೂಗಲಾಗಿದ್ದು , ಕೋಳಿ ಪ್ರಿಯರು ಠಾಣೆ ಮುಂದೆ ಜಮಾಯಿಸಿದ್ದರು.


# ಪದ್ಮಭೂಷಣ ಗೌರವಕ್ಕೆ ಪಾತ್ರರಾದ ಸೀತಾರಾಮ್ ಜಿಂದಾಲ್

ಬೆಂಗಳೂರು: ಸಮಾಜಸೇವೆ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಜನಪ್ರಿಯ ಹೆಸರಾಗಿರುವ ಡಾ. ಸೀತಾರಾಮ್ ಜಿಂದಾಲ್ ಪ್ರತಿಷ್ಠಿತ ಪದ್ಮಭೂಷಣ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಅವರ ಅಪ್ರತಿಮ ಸಮಾಜಸೇವೆ ಕೆಲಸಗಳಿಗೆ, ವಿಶೇಷವಾಗಿ ಪ್ರಕೃತಿ ಚಿಕಿತ್ಸೆ ಕ್ಷೇತ್ರದಲ್ಲಿನ ಅವರ ಮಹತ್ವದ ಕೊಡುಗೆಗಳ ಕಾರಣಕ್ಕೆ ಈ ಪುರಸ್ಕಾರವು ಪ್ರಾಪ್ತವಾಗಿದೆ. ಡಾ. ಜಿಂದಾಲ್ ಅವರ ಔಷಧ ರಹಿತ ಚಿಕಿತ್ಸೆಗೆ ಮತ್ತು ಜಿಂದಾಲ್ ನೇಚರ್‌ಕ್ಯೂರ್ ಇನ್‌ಸ್ಟಿಟ್ಯೂಟ್ (ಜೆಎನ್‌ಐ) ಸ್ಥಾಪನೆಗೆ ಅವರಿಗೆ ಈ ಮನ್ನಣೆ ಸಂದಿದೆ.

1932ರಲ್ಲಿ ಹರಿಯಾಣದ ನಲ್ವಾ ಎಂಬ ಹಳ್ಳಿಯಲ್ಲಿ ಜನಿಸಿದ ಡಾ. ಜಿಂದಾಲ್ ಅವರು ವಿಶ್ವವಿದ್ಯಾನಿಲಯದಲ್ಲಿ ಓದುತ್ತಿದ್ದ ಸಂದರ್ಭದಲ್ಲಿ ಕಿಬ್ಬೊಟ್ಟೆಯ ಕ್ಷಯರೋಗಕ್ಕೆ ತುತ್ತಾದರು. ಅಲ್ಲಿಂದ ಅವರ ನೇಚರ್‌ಕ್ಯೂರ್ ಪ್ರಯಾಣ ಆರಂಭವಾಯಿತು. ಗುಣಪಡಿಸಲಾಗದಂತಹ ಅತೀವ ಸಂಕಷ್ಟದ ಸ್ಥಿತಿಯನ್ನು ಎದುರಿಸಿದ ಅವರು ಕಡೆಗೆ ಸಣ್ಣ ನೇಚರ್‌ಕ್ಯೂರ್ ಕ್ಲಿನಿಕ್ ಆಶ್ರಯ ಪಡೆದರು. ಅಲ್ಲಿ ಉಪವಾಸ, ಎನಿಮಾಗಳು ಮತ್ತು ಇತರ ಅಸಾಂಪ್ರದಾಯಿಕ ವಿಧಾನಗಳ ಮೂಲಕ ಗುಣಮುಖರಾದರು. ಈ ವಿಶಿಷ್ಟ ಅನುಭವವು ಪ್ರಕೃತಿ ಚಿಕಿತ್ಸೆ ಮತ್ತು ಯೋಗದಲ್ಲಿ ಅವರಿಗೆ ಅಚಲವಾದ ನಂಬಿಕೆಯನ್ನು ಹುಟ್ಟುಹಾಕಿತು.

ಸಮಗ್ರ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಆಸ್ಪತ್ರೆಯನ್ನು ಸ್ಥಾಪಿಸುವ ದೂರದೃಷ್ಟಿಯಿಂದ ಡಾ. ಜಿಂದಾಲ್ 1977-79ರಲ್ಲಿ ಬೆಂಗಳೂರಿನ ಹೊರವಲಯದಲ್ಲಿ ವಿಶಾಲವಾದ ಭೂಮಿಯನ್ನು ಸ್ವಾಧೀನಪಡಿಸಿಕೊಂಡರು. ಇದು ಜೆಎನ್‌ಐನ ಆರಂಭ ಎಂದೇ ಗುರುತಿಸಲ್ಪಟ್ಟಿದೆ. ಜೆಎನ್‌ಐಯು ಜಿಂದಾಲ್ ಅಲ್ಯೂಮಿನಿಯಂ ಲಿಮಿಟೆಡ್ ನಿಂದ ಪಡೆದ ಧನಸಹಾಯದಿಂದ ರಚಿಸಿದ ಸಂಶೋಧನಾ ವಿಭಾಗವನ್ನು ಹೊಂದಿದೆ. ಅದು ಪ್ರಕೃತಿ ಚಿಕಿತ್ಸೆಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವ ಡಾ. ಜಿಂದಾಲ್ ಅವರ ಬದ್ಧತೆಗೆ ಸಾಕ್ಷಿಯಾಗಿದೆ.

ಆ ಸಮಯದಲ್ಲಿ ಪ್ರಚಲಿತದಲ್ಲಿದ್ದ ಸಾಂಪ್ರದಾಯಿಕ ಪ್ರಕೃತಿ ಚಿಕಿತ್ಸೆಯ ಚಿಕಿತ್ಸೆಗಳಿಗೆ ಸಂಪೂರ್ಣ ವ್ಯತಿರಿಕ್ತವಾಗಿ ಡಾ. ಜಿಂದಾಲ್ ಈ ವಿಜ್ಞಾನವನ್ನು ಆಧುನೀಕರಿಸುವ ಮತ್ತು ಆವಿಷ್ಕರಿಸುವ ಕಾರ್ಯ ಪ್ರಾರಂಭಿಸಿದರು. ಸಾಂಪ್ರದಾಯಿಕ ಪ್ರಕೃತಿ ಚಿಕಿತ್ಸಾ ಪದ್ಧತಿಗಳಲ್ಲಿ ಅಭಿವೃದ್ಧಿಯ ಕೊರತೆಯನ್ನು ಗುರುತಿಸಿ, ಅವರು ಔಷಧರಹಿತ ಚಿಕಿತ್ಸೆಗಳನ್ನು ಒದಗಿಸಲು ಮತ್ತು ಹೆಚ್ಚು ಹೆಚ್ಚು ಬಳಸುವಂತೆ ಮಾಡುವ ನಿಟ್ಟಿನಲ್ಲಿ ತಮ್ಮನ್ನು ತಾವು ಸಮರ್ಪಿಸಿಕೊಂಡರು.1969ರಲ್ಲಿ ಸ್ಥಾಪಿತವಾದ ಎಸ್ ಜೆ ಫೌಂಡೇಶನ್, ಅವರ ದಾನ ಕಾರ್ಯಗಳಿಗೆ ಆರ್ಥಿಕ ಆಧಾರಸ್ತಂಭವಾಯಿತು. ಅದು ಸರ್ಕಾರ ಅಥವಾ ಇತರ ವ್ಯಕ್ತಿಗಳಿಂದ ನೆರವನ್ನು ಪಡೆಯದೆ, ಜೆಎಎಲ್‌'ನ ಕೊಡುಗೆಗಳ ಮೇಲೆ ಮಾತ್ರ ಅವಲಂಬಿತವಾಗಿತ್ತು.



ಅಸ್ತಮಾ, ಮಧುಮೇಹ, ಅಧಿಕ ರಕ್ತದೊತ್ತಡ, ಸಂಧಿವಾತ ಮತ್ತು ಕೆಲವು ಕ್ಯಾನ್ಸರ್ ಪ್ರಕರಣಗಳು ಸೇರಿದಂತೆ ವಿವಿಧ ಕಾಯಿಲೆಗಳ ಚಿಕಿತ್ಸೆಗಾಗಿ ವಿಶೇಷ ವಿಶ್ವ ದರ್ಜೆಯ ಸೌಲಭ್ಯವಾದ ಜೆಎನ್‌ಐ ಸ್ಥಾಪಿಸಿದ ಡಾ. ಜಿಂದಾಲ್ ಅವರ ದಣಿವರಿಯದ ಪ್ರಯತ್ನಗಳು ಔಷಧರಹಿತ ಚಿಕಿತ್ಸೆ ಕ್ಷೇತ್ರದಲ್ಲಿ ಗಣನೀಯವಾದ ಪ್ರಭಾವವನ್ನು ಬೀರಿದೆ. ಆ ಇನ್ ಸ್ಟಿಟ್ಯೂಟ್ 550 ಹಾಸಿಗೆಗಳ ಹೆಗ್ಗಳಿಕೆ ಹೊಂದಿದ್ದು, ತಮ್ಮ ಆರೋಗ್ಯ ಕಾಳಜಿಗಾಗಿ ಔಷಧ-ಮುಕ್ತ ಪರ್ಯಾಯ ಚಿಕಿತ್ಸೆಗಳನ್ನು ಬಯಸುವವರಿಗೆ ಭರವಸೆಯ ದಾರಿದೀಪವಾಗಿದೆ.

ಜೆಎನ್‌ಐ ಜೊತೆಗೆ, ಡಾ. ಜಿಂದಾಲ್ ಹಲವಾರು ದತ್ತಿ ಚಟುವಟಿಕೆಗಳಿಗೆ ನೆರವಾಗಿದ್ದಾರೆ. ಆ ಮೂಲಕ ಸಾಮಾಜಿಕ ಸುಧಾರಣೆದೆಡೆಗಿನ ಅವರ ಬದ್ಧತೆಯನ್ನು ಪ್ರದರ್ಶಿಸಿದ್ದಾರೆ. ಅಲೋಪತಿ ಆಸ್ಪತ್ರೆಗಳು, ಶಾಲೆಗಳು ಮತ್ತು ಕಾಲೇಜುಗಳ ಸ್ಥಾಪನೆ, ಗ್ರಾಮೀಣಾಭಿವೃದ್ಧಿ ಉಪಕ್ರಮಗಳು, ಆರೋಗ್ಯ ಮತ್ತು ಶಿಕ್ಷಣಕ್ಕಾಗಿ ಗ್ರಾಮಗಳ ದತ್ತು ಮತ್ತು ಆರೋಗ್ಯ ಮತ್ತು ಶಿಕ್ಷಣದಲ್ಲಿ ದಣಿವರಿಯಿಲ್ಲದೆ ಕೆಲಸ ಮಾಡುವ ವಿವಿಧ ಎನ್‌ಜಿಓಗಳಿಗೆ ಅವರು ನೆರವು ನೀಡಿದ್ದಾರೆ.

ಡಾ. ಜಿಂದಾಲ್ ಅವರ ಲೋಕೋಪಕಾರಿ ಪ್ರಯತ್ನಗಳು ಪ್ರಕೃತಿ ಚಿಕಿತ್ಸೆಯ ಆಚೆಗೂ ವಿಸ್ತರಿಸಿವೆ. ಅವರ ಹುಟ್ಟೂರಾದ ನಲ್ವಾದಲ್ಲಿ ಎಂಟು ದತ್ತಿ ಘಟಕಗಳ ಸ್ಥಾಪನೆ ಮಾಡಿದ್ದಾರೆ.

ಅವು ಸುತ್ತಲಿನ ಪ್ರದೇಶಗಳಲ್ಲಿ ಬಹಳಷ್ಟು ಜನಸಂಖ್ಯೆಗೆ ಪ್ರಯೋಜನ ಒದಗಿಸುತ್ತಿವೆ. ಆರೋಗ್ಯ ಮತ್ತು ಶಿಕ್ಷಣಕ್ಕೆ ಬದ್ಧವಾಗಿರುವ ಎನ್‌ಜಿಓಗಳ ಮೂಲಕ ಹಿಂದುಳಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಆರ್ಥಿಕ ಬೆಂಬಲ ನೀಡುವ ಅವರ ಕೆಲಸಗಳಿಂದ ಸಮಾಜ ಕಲ್ಯಾಣದ ಅವರ ಕನಸು ತಿಳಿಯಬಹುದಾಗಿದೆ.

ಡಾ. ಜಿಂದಾಲ್ ಅವರ ಕೆಲಸಗಳ ಪರಿಣಾಮವು ಜೆಎನ್‌ಐಯನ್ನು ಮೀರಿದ್ದಾಗಿದೆ.

ಅವರು ಪ್ರಕೃತಿ ಚಿಕಿತ್ಸೆ ಮತ್ತು ಯೋಗಕ್ಕೆ ಒತ್ತು ನೀಡಿರುವುದು ಜಾಗತಿಕವಾಗಿ ಲಕ್ಷಾಂತರ ಜನರ ಜೀವನ ಪರಿವರ್ತಿಸಿದೆ. ನಿರೋಧಕ ಚಿಕಿತ್ಸೆಯಲ್ಲಿನ ಅವರ ಬದ್ಧತೆ ಮತ್ತು ಔಷಧಿಗಳ ಅಡ್ಡ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವುದು ಇತ್ಯಾದಿಗಳು ಹಾಗು ಪ್ರಕೃತಿ ಚಿಕಿತ್ಸೆಯು ಅಲೋಪತಿ ಆಸ್ಪತ್ರೆಗಳ ಮೇಲಿನ ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ ಎಂಬ ಅವರ ನಂಬಿಕೆಯೊಂದಿಗೆ ಹೊಂದಿಕೆಯಾಗುತ್ತದೆ.

ತನ್ನ ಪ್ರಯಾಣದ ಉದ್ದಕ್ಕೂ, ಡಾ. ಜಿಂದಾಲ್ ಹಲವಾರು ಆವಿಷ್ಕಾರಗಳು ಮತ್ತು ಚಿಕಿತ್ಸೆಗಳನ್ನು ಪರಿಚಯಿಸಿದ್ದಾರೆ. ಹಲವಾರು ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಿದ್ದಾರೆ.

ಸರಳವಾದ ಹೊಟ್ಟೆ ಪ್ಯಾಕ್ ಗಳಿಂದ ಹರ್ಬಲ್ ಟೀಗಳು, ಬೆನ್ನುಮೂಳೆಯ ಸ್ನಾನದ ತೊಟ್ಟಿಗಳು ಮತ್ತು ಶೀತ ಮತ್ತು ಬಿಸಿ ರಿಫ್ಲೆಕ್ಸೋಲಜಿ ಟ್ರ್ಯಾಕ್‌ಗಳವರೆಗಿನ ಅವರ ಕೊಡುಗೆಗಳು ಪ್ರಕೃತಿ ಚಿಕಿತ್ಸಾ ಕ್ಷೇತ್ರದ ವಿಸ್ತಾರವನ್ನು ಮತ್ತಷ್ಟು ಹೆಚ್ಚಿಸಿದೆ.

ಅವರ ದೂರದೃಷ್ಟಿಯ ನಾಯಕತ್ವ ಮತ್ತು ಅಪಾರ ಕೊಡುಗೆಗಳನ್ನು ಗುರುತಿಸಿ, ಡಾ. ಜಿಂದಾಲ್ ಅವರು ಮಾಜಿ ಪ್ರಧಾನಿಗಳಾದ ಅಟಲ್ ಬಿಹಾರಿ ವಾಜಪೇಯಿ, ಚಂದ್ರಶೇಖರ್, ಐ.ಕೆ ಗುಜ್ರಾಲ್, ಎಚ್.ಡಿ. ದೇವೇಗೌಡ, ಉಪಪ್ರಧಾನಿ ದೇವಿಲಾಲ್ ಮತ್ತು ಕರ್ನಾಟಕದ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಸೇರಿದಂತೆ ಹಲವು ಗಣ್ಯ ವ್ಯಕ್ತಿಗಳಿಂದ ಗೌರವ ಪುರಸ್ಕಾರಗಳನ್ನು ಪಡೆದಿದ್ದಾರೆ.

VOL. 04 ISSUE. 309 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089